ಜನರಿಗೆ ಅತ್ಯಾಧುನಿಕ ಶೌಚಾಲಯ ನಿರ್ಮಾಣ: ಚಲುವರಾಯಸ್ವಾಮಿ

• **ಕನ್ನಡಪ್ರಭ ವಾರ್ತೆ**
ನಾಗಮಂಗಲ

ಜನಸಾಮಾನ್ಯರಿಗೆ ಮೂಲ ಸೌಕರ್ಯ ಕಲ್ಪಿಸುವುದು ನಮ್ಮ ಮೊದಲ ಆದ್ಯತೆಯಾಗಿರುವ ಹಿನ್ನೆಲೆ ಪಟ್ಟಣ ಮತ್ತು ಗ್ರಾಮೀಣ ಪ್ರದೇಶದ ಜನರ ಅನುಕೂಲಕ್ಕಾಗಿ ಅತ್ಯಾಧುನಿಕ ಶೈಲಿಯ ಹೈಟೆಕ್ ಶೌಚಾಲಯ ನಿರ್ಮಿಸಲಾಗುತ್ತಿದೆ ಎಂದು ಕೃಷಿ ಹಾಗೂ ಜಿಲ್ಲಾ ಉಸ್ತುವಾರಿಸಚಿವಎನ್.ಚಲುವರಾಯ ಸ್ವಾಮಿ ತಿಳಿಸಿದರು.



ಪಟ್ಟಣದ ಟಿ.ಮರಿಯಪ್ಪ ವೃತ್ತದ ಪ್ರಯಾಣಿಕರ ತಂಗುದಾಣದ ಹಿಂಭಾಗದಲ್ಲಿ ಸಾರ್ವಜನಿಕ ಖಾಸಗಿ ಪಾಲುದಾರಿಕೆ ಪದ್ಧತಿಯಲ್ಲಿ ಭರವಸೆ ಸಾಮಾಜಿಕ ಸೇವಾ ಸಂಸ್ಥೆ ವತಿಯಿಂದ ₹15 ಲಕ್ಷ ವೆಚ್ಚದ ಹೈಟೆಕ್ ಶೌಚಾಲಯ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ಸಹಸ್ರಾರು ಮಂದಿ ಮಹಿಳೆಯರು, ಮಕ್ಕಳು ಮತ್ತು ವಯೋವೃದ್ಧರಿಗೆ ಸೂಕ್ತವಾದ ಸಾರ್ವಜನಿಕ ಶೌಚಾಲಯವಿಲ್ಲದೆ ಬಹಳಷ್ಟು ತೊಂದರೆಯಾಗುತ್ತಿದೆ. ಈ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಹಿಡಿಯುವ ಸಲುವಾಗಿಅತ್ಯಾಧುನಿಕ ಹೈಟೆಕ್ ಶೌಚಾಲಯ ನಿರ್ಮಿಸಲಾಗುತ್ತಿದೆ ಎಂದರು.

ಶೌಚಾಲಯ ಬಳಸಲು ಜನರು ಎಷ್ಟು ಹಣ ಪಾವತಿಸಬೇಕಾಗುತ್ತದೆ ಎಂಬುದರ ಬಗ್ಗೆ ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸಿ ದರ ನಿಗದಿಪಡಿಸಲಾಗುವುದು. ಕಾಮಗಾರಿನಿರ್ವಹಿಸುವ ಏಜೆನ್ಸಿಯವರು ಮೂರು ತಿಂಗಳಲ್ಲಿ ಗುಣಮಟ್ಟದಿಂದ ಕೂಡಿರುವ ಹೈಟೆಕ್ ಶೌಚಾಲಯ ನಿರ್ಮಿಸಿ ಸಾರ್ವಜನಿಕರ ಬಳಕೆಗೆ ಅನುಕೂಲ ಮಾಡಿಕೊಡಬೇಕು ಎಂದು ಗುತ್ತಿಗೆದಾರರಿಗೆ ಸೂಚಿಸಿದರು.

ಟಿ.ಮರಿಯಪ್ಪ ವೃತ್ತದಲ್ಲಿ ಸಾರಿಗೆ ಮತ್ತು ಕೆಲ ಖಾಸಗಿ ಬಸ್‌ಗಳು ಬಹಳ ಹೊತ್ತು ನಿಲ್ಲುವುದರಿಂದ ಹೆದ್ದಾರಿಯ ವಾಹನಗಳ ಸಂಚಾರಕ್ಕೆ ಮತ್ತು ಪಾದಾಚಾರಿಗಳಿಗೆ ಬಹಳಷ್ಟು ತೊಂದರೆಯಾಗುತ್ತಿರುವ ಬಗ್ಗೆ ವ್ಯಾಪಕವಾಗಿ ದೂರುಗಳು ಕೇಳಿಬರುತ್ತಿವೆ. ಹಾಗಾಗಿ ಈ ವೃತ್ತದಲ್ಲಿ ಯಾವುದೇ ಬಸ್‌ಗಳು ನಿಲ್ಲಬಾರದು, ಪ್ರಯಾಣಿಕರನ್ನು ಇಳಿಸಿ ಹತ್ತಿಸಿಕೊಂಡ ತಕ್ಷಣ ತೆರಳುವಂತೆ ಕ್ರಮವಹಿಸಬೇಕೆಂದುಪಟ್ಟಣಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್‌ಶಿವಕುಮಾರ್‌ಗೆ ಸೂಚಿಸಿದರು. ಈ ವೇಳೆ ಎಂಡಿಸಿಸಿ ಬ್ಯಾಂಕ್ ಅಧ್ಯಕ್ಷ ಸಚ್ಚಿನ್ ಚಲುವ ರಾಯಸ್ವಾಮಿ, ತಹಸೀಲ್ದಾರ್‌ಜಿ.ಆದರ್ಶ, ತಾಪಂ ಇಒ ಬಿ.ಎಸ್.ಸತೀಶ್, ಪುರಸಭೆ ಮುಖ್ಯಾಧಿಕಾರಿ ವೀಣಾ, ಹಿರಿಯಆರೋಗ್ಯನಿರೀಕ್ಷಕವೆಂಕಟೇಶ್, ಪುರಸಭೆ ಮಾಜಿ ಅಧ್ಯಕ್ಷ ತಿಮ್ಮಪ್ಪ, ಮುಖಂಡರಾದಸುನಿಲ್ ಲಕ್ಷ್ಮೀಕಾಂತ್, ಮಾವಿನಕೆರೆ ಸುರೇಶ್, ಫಣಿಕಿರಣ್, ರವಿಕಾಂತೇಗೌಡ, ಎನ್.ನಟರಾಜ್, ಸಂಪತ್‌ಕುಮಾರ್, ಸುನಿಲ್, ವಿನಯ್, ಸುಭಾಷ್, ರೇವಣ್ಣ ಸೇರಿದಂತೆ ಹಲವರು ಇದ್ದರು.

ಕೊಳವೆಬಾವಿಗಳ ಕೇಬಲ್ ಕಳ್ಳನ ಸೆರೆ

ದಾಬಸ್‌ಪೇಟೆ: ತ್ಯಾಮಗೊಂಡ್ಲು ರೈತರ ಕೃಷಿ ಪಂಪ್‌ಸೆಟ್‌ಗಳು ಹಾಗೂ ಗ್ರಾಪಂಗಳು ನೀರು ಪೂರೈಸುವ ಕೊಳವೆ ಬಾವಿಗೆ ಅಳವಡಿಸಿರುವ ಪಂಪ್‌ಸೆಟ್‌ಗಳಲ್ಲಿನ ಕೇಬಲ್ ಕಳವು ಮಾಡುತ್ತಿದ್ದ ಕಳ್ಳನನ್ನು ವಾದಕುಂಟೆ ಗ್ರಾಮಸ್ಥರು ಹಿಡಿದು, ಪೊಲೀಸರಿಗೆ ಒಪ್ಪಿಸಿದ್ದಾರೆ. ನೆಲಮಂಗಲದ ಇಸ್ಲಾಂಪುರ ನಿವಾಸಿ ಮಹಮ್ಮದ್ ರೋಷನ್(28) ಸಿಕ್ಕಿಬಿದ್ದವನು. ಈತನನ್ನು ಗ್ರಾಮಸ್ಥರು ಹಿಡಿದು ಬಟ್ಟೆ ಬಿಚ್ಚಿ ಗ್ರಾಮದಲ್ಲಿ ಮೆರವಣಿಗೆ ಮಾಡಿ, ನಂತರ ಪೊಲೀಸರಿಗೆ ಒಪ್ಪಿಸಿದ್ದಾರೆ. ಮತ್ತೊಬ್ಬ ಪರಾರಿಯಾಗಿದ್ದಾನೆ.ವಾದ ಕುಂಟೆ ಗ್ರಾಮದ ತೋಟಗಳಲ್ಲಿ ಅನುಮಾನಾಸ್ಪದವಾಗಿ ಓಡಾಡುತ್ತಿದ್ದ ಇಬ್ಬರನ್ನು ಕಂಡ ಯುವಕರು, ಎರಡು ಗುಂಪು ಮಾಡಿಕೊಂಡು ಒಬ್ಬ ಕಳ್ಳನನ್ನು ಹಿಡಿದಿದ್ದಾರೆ.

ರೈಲಿನಲ್ಲಿ ಚಾಕು ಇರಿತ ಪ್ರಕರಣ: ರೈಲ್ವೆ ಪೊಲೀಸ್ ಅಧಿಕಾರಿಗಳಿಂದ ಪರಿಶೀಲನೆ

ಮದ್ದೂರು: ಪಟ್ಟಣದ ಚನ್ನೇಗೌಡನದೊಡ್ಡಿಯ ರೈಲ್ವೆ ಗೇಟ್ ಬಳಿ ಬುಧವಾರ ರಾಜ ರಾಣಿ ಎಕ್ಸ್‌ಪ್ರೆಸ್ ರೈಲಿನಲ್ಲಿಸೀಟ್ ವಿಚಾರಕ್ಕೆ ವಿವಾದ ಉಂಟಾಗಿ ಮೂವರು ಯುವಕರು, ಪ್ರಯಾಣಿಕರು ಹಾಗೂ ರೈಲ್ವೆ ಗೇಟ್ ಮ್ಯಾನ್ ಮೇಲೆ ಹಲ್ಲೆ ನಡೆಸಿ ಚಾಕುವಿನಿಂದ ಇರಿದ ಪ್ರಕರಣ ಕುರಿತಂತೆ ರೈಲ್ವೆ ಪೊಲೀಸ್ ಹಿರಿಯ ಅಧಿಕಾರಿಗಳ ತಂಡ ಬುಧವಾರ ಸಂಜೆ ಸ್ಥಳ ಪರಿಶೀಲನೆ ನಡೆಸಿದರು. ದಕ್ಷಿಣ ರೈಲ್ವೆ ಪೊಲೀಸ್ ವರಿಷ್ಠಾಧಿಕಾರಿ ತಾರಾ ಫಾತೀಮಾ, ಡಿವೈಎಸ್ಪಿ ಸತೀಶ್ ಕುಮಾರ್, ಇನ್ಸ್‌ಪೆಕ್ಟರ್ ಚೇತನ್, ರೈಲ್ವೆ ಸುರಕ್ಷತಾ ದಳದ ಅಸಿಸ್ಟೆಂಟ್ ಕಮಿಷನರ್‌ನಾರಾಯಣಸ್ವಾಮಿ ಹಾಗೂ ಸಿಬ್ಬಂದಿ ಸ್ಥಳ ಪರಿಶೀಲನೆ ನಡೆಸಿ ಘಟನೆ ಬಗ್ಗೆ ಮಾಹಿತಿ ಪಡೆದುಕೊಂಡರು. ನಂತರ ಮಂಡ್ಯ ಮತ್ತು ಮದ್ದೂರು ಆಸ್ಪತ್ರೆಯಲ್ಲಿ ಚಾಕು ಇರಿತದಿಂದ ಗಾಯಗೊಂಡು ಚಿಕಿತ್ಸೆ ಪಡೆಯುತ್ತಿರುವ ರೈಲ್ವೆ ಗೇಟ್ ಮ್ಯಾನ್ ಕುಮಾರ್‌ಮತ್ತು ಶಿವಕುಮಾರ್‌ಅವರುಗಳನ್ನು ಭೇಟಿ ಮಾಡಿ ಸಾಂತ್ವನ ಹೇಳಿದರು. ನಂತರ ಸಾರ್ವಜನಿಕರ ಹಲ್ಲೆಯಿಂದಾಗಿ ಗಾಯಗೊಂಡಿರುವ ಆರೋಪಿಗಳಾದ ಮೈಸೂರು ಗೌಸಿಯಾ ನಗರದ ಖುರೇಶಿ, ವಾಸೀಮ್ ಹಾಗೂಸುಯೇಜ್ ಅವರುಗಳನ್ನು ವಿಚಾರಣೆನಡೆಸಿದರು. ಘಟನೆಸಂಬಂಧಮೂವರು ಆರೋಪಿಗಳ ವಿರುದ್ಧ ರೈಲ್ವೆ ಪೊಲೀಸರು ಪ್ರಕರಣ ದಾಖಲು ಮಾಡಿಕೊಂಡಿದ್ದಾರೆ.

ಆಧ್ಯಾತ್ಮ, ಸಂಸ್ಕೃತಿಗಳೆರಡು ಶುದ್ಧವಾದ ನೀರಿನಂತೆ: ನಿರ್ಮಲಾನಂದನಾಥಶ್ರೀ

ಮಂಡ್ಯದಲ್ಲಿ ನೂತನವಾಗಿ ನಿರ್ಮಿಸಿರುವ ಶ್ರೀ ಕಾಲಭೈರವೇಶ್ವರಸ್ವಾಮಿ ದೇಗುಲ ಲೋಕಾರ್ಪಣೆ





ಮಂಡ್ಯ ಬಂದೀಗೌಡ ಬಡಾವಣೆಯಲ್ಲಿ ಆದಿಚುಂಚನಗಿರಿ ನೂತನವಾಗಿ ನಿರ್ಮಾಣ ಮಾಡಿರುವ ಶ್ರೀ ಕಾಲಭೈರವೇಶ್ವರಸ್ವಾಮಿ ದೇವಾಲಯವನ್ನು ಲೋಕಾರ್ಪಣೆಗೊಳಿಸಿ ಶ್ರೀ ನಿರ್ಮಲಾನಂದನಾಥ ಶ್ರೀಗಳು ಪೂಜೆ ಸಲ್ಲಿಸಿದರು.ದೇವಾಲಯ ಲೋಕಾರ್ಪಣೆಗೊಳಿಸಿ ನಿರ್ಮಲಾನಂದನಾಥ ಸ್ವಾಮೀಜಿ ಮಾತನಾಡಿದರು.

• **ಕನ್ನಡಪ್ರಭ ವಾರ್ತೆ** ಮಂಡ್ಯ

ಆಧ್ಯಾತ್ಮ ಮತ್ತು ಸಂಸ್ಕೃತಿ ಶುದ್ಧವಾದ ನೀರಿದ್ದಂತೆ, ಮೌಲ್ಯಾಧಾರಿತ ವ್ಯಕ್ತಿಗಳು ಸಮಾಜದಲ್ಲಿ ಸದಾ ತಿಳಿಯಾದ ನೀರಿನಂತೆ ಇರಬೇಕು ಎಂದು ಆದಿಚುಂಚನಗಿರಿ ಪೀಠಾಧಿಪತಿ ಶ್ರೀ ಡಾ.ನಿರ್ಮಲಾನಂದನಾಥ ಸ್ವಾಮೀಜಿ ಅಭಿಪ್ರಾಯಪಟ್ಟರು.

ನಗರದ ಬಂದೀಗೌಡ ಬಡಾವಣೆಯಲ್ಲಿ ನೂತನವಾಗಿ ನಿರ್ಮಿಸಿರುವ ಶ್ರೀ ಕಾಲಭೈರವೇಶ್ವರಸ್ವಾಮಿ ದೇವಾಲಯ ಲೋಕಾರ್ಪಣೆ ಕಾರ್ಯಕ್ರಮದಲ್ಲಿ ದಿವ್ಯಸಾನ್ನಿಧ್ಯ ವಹಿಸಿ ಮಾತನಾಡಿ, ಪ್ರಜ್ಞೆ ಎನ್ನುವುದು ಸೂರ್ಯನಿದ್ದಂತೆ. ಮನಸ್ಸು ಮಲೀನಗೊಂಡಾಗ ಮೋಡಗಳು ಸೂರ್ಯನನ್ನು ಮರೆಮಾಚುವಂತೆ ಪ್ರಜ್ಞೆಮರೆಯಾಗಬಹುದು, ಆದರೆ, ಶುದ್ಧ ಪ್ರಜ್ಞೆಯೇ ನಮ್ಮ ಸ್ವರೂಪ ಎಂದು ತಿಳಿಸಿದರು.

ಮಠದ ಯಾವುದೇ ಕಾರ್ಯಕ್ರಮಗಳಿಗೆ ಬರಲು ಇಂತಿಷ್ಟು ಹಣ ಕೊಡಬೇಕು ಎನ್ನುವ ಸಂಪ್ರದಾಯ ಆದಿಚುಂಚನಗಿರಿ ಮಠದಲ್ಲಿಲ್ಲ, ದೇವಸ್ಥಾನ ನಿರ್ಮಾಣದಂತಹ ವಿಶೇಷ ಯೋಜನೆಗಳಿಗೆ ಮಾತ್ರ ಭಕ್ತರು ಸ್ವಯಂಪ್ರೇರಣೆಯಿಂದ ಕಾಣಿಕೆ ನೀಡಿದ್ದಾರೆ. ಈವರ್ಷದಲ್ಲಿಕನಿಷ್ಠ9 ದಿನಗಳಕಾಲ ಆದಿಚುಂಚನಗಿರಿ ಶ್ರೀಕ್ಷೇತ್ರಕ್ಕೆ ಭೇಟಿ ನೀಡಿ ಭೈರವೇಶ್ವರನ ಕೃಪೆಗೆ ಪಾತ್ರರಾಗಬೇಕು ಎಂಬುದು ನಾಥ ಸಂಪ್ರದಾಯದ ಆಶಯವಾಗಿದೆ ಎಂದು ಹೇಳಿದರು.

ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ಮಾತನಾಡಿ, ಪೂಜ್ಯ ಪುರುಷೋತ್ತಮಾನಂದನಾಥ ಸ್ವಾಮೀಜಿಯವರು ಬೆಂಗಳೂರಿನ ವಿಜಯನಗರದಲ್ಲಿ 25 ವರ್ಷಗಳ ಹಿಂದೆಯೇ ಹೈಟೆಕ್ ಶಾಲೆ ನಿರ್ಮಿಸಿ ಉತ್ತಮ ಗುಣಮಟ್ಟದ ಶಿಕ್ಷಣ ನೀಡಲು ಅವರು ಕಾರಣಕರ್ತರಾಗಿದ್ದಾರೆ. ಕೆಲವು ತಿಂಗಳ ಹಿಂದೆ ಶ್ರೀಗಳ ಆರೋಗ್ಯದಲ್ಲಿ ಏರುಪೇರಾಗಿ ಆಸ್ಪತ್ರೆಗೆ ದಾಖಲಾಗಿದ್ದರೂ ವಿಶ್ರಾಂತಿ ಪಡೆಯದೆ ಈ ದೇವಸ್ಥಾನ ಲೋಕಾರ್ಪಣೆಗಾಗಿ ಶ್ರಮಿಸಿದ್ದಾರೆ. ದೇವಸ್ಥಾನದ ಸಂಕಲ್ಪ ಶಕ್ತಿ ಮತ್ತು ಸ್ವಾಮೀಜಿಯವರ ಛಲಕ್ಕೆ ಇಡೀ ಭಕ್ತ ಸಮೂಹದ ಪರವಾಗಿ ಕೃತಜ್ಞತೆ ಅರ್ಪಿಸುವುದಾಗಿ ತಿಳಿಸಿದರು.

ಭಕ್ತರಿಗೆಪ್ರಸಾದಬಡಿಸಿದಶ್ರೀಗಳು: ಕಾರ್ಯಕ್ರಮಕ್ಕೆ ಆಗಮಿಸಿದ್ದ ಭಕ್ತಾದಿಗಳಿಗೆ ಕಳೆದ ಮೂರು ದಿನಗಳಿಂದ ಅನ್ನಸಂತರ್ಪಣೆ ಸೇವಾರ್ಥ ನೆರವೇರಿಸಿದ ಪಿಇಟಿ ಅಧ್ಯಕ್ಷ ಕೆ.ಎಸ್. ವಿಜಯ್ ಆನಂದ್ ಅವರನ್ನು ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಸನ್ಮಾನಿಸಿ ಗೌರವಿಸಿದರು. ಭಕ್ತರನ್ನು ಖುದ್ದು ಶ್ರೀಗಳೇ ಭೇಟಿ ಮಾಡಿ ಪ್ರಸಾದ ಬಡಿಸಿ ಆಶೀರ್ವದಿಸಿದರು.

ಶ್ರೀಮಠ ವಿಶ್ವವ್ಯಾಪಿ ಪಸರಿಸಲು ಬಾಲಗಂಗಾಧರನಾಥ ಶ್ರೀಗಳು ಕಾರಣ: ಡಾ. ನಿಶ್ಚಲಾನಂದನಾಥ ಸ್ವಾಮೀಜಿ

ಮಂಡ್ಯ: ಅರಳಿ ಹಾಗೂ ಆಲದ ಮರದ ವೃಕ್ಷದಂತೆ ಆದಿಚುಂಚನಗಿರಿ ಶ್ರೀಮಠ ಇಂದು ವಿಶ್ವದೆಲ್ಲೆಡೆ ತನ್ನ ಕಾರ್ಯವ್ಯಾಪ್ತಿಯನ್ನು ಪಸರಿಸಿಕೊಳ್ಳಲು ಭೈರವೈಕ್ಯ ಬಾಲಗಂಗಾಧರನಾಥ ಶ್ರೀಗಳ ದೂರದೃಷ್ಟಿ ಅಪಾರ ಎಂದು ವಿಶ್ವ ಒಕ್ಕಲಿಗರ ಮಹಾಸಂಸ್ಥಾನ ಮಠದ ಪೀಠಾಧಿಪತಿ ಶ್ರೀ ಡಾ. ನಿಶ್ಚಲಾನಂದನಾಥ ಸ್ವಾಮೀಜಿ ಅಭಿಪ್ರಾಯಪಟ್ಟರು.

ಆದಿಚುಂಚನಗಿರಿ ಶ್ರೀಮಠದ ವತಿಯಿಂದ ನಗರದ ಬಂದೀಗೌಡ ಬಡಾವಣೆಯಲ್ಲಿ ನೂತನವಾಗಿ ನಿರ್ಮಾಣ ಮಾಡಿರುವ ಶ್ರೀ ಕಾಲಭೈರವೇಶ್ವರಸ್ವಾಮಿ ದೇವಾಲಯ ಲೋಕಾರ್ಪಣೆಯಲ್ಲಿ ಆಶೀರ್ವಚನ ನೀಡಿದ ಅವರು, ಭಾರತೀಯ ಧಾರ್ಮಿಕ ಸಂಸ್ಕೃತಿಯ ಬೀಜವನ್ನು ಜನಸಾಮಾನ್ಯರ ಮನದಲ್ಲಿ ಬಿತ್ತಲು ಶ್ರಮಿಸಿದ ಭೈರವೈಕ್ಯ ಬಾಲಗಂಗಾಧರರ ಜೊತೆ ಪುರುಷೋತ್ತಮಾನಂದನಾಥ ಶ್ರೀಗಳ ಸೇವೆಯೂ ಸ್ಮರಣೀಯ ಎಂದು ಪ್ರಶಂಶಿಸಿದರು.

ಆಧ್ಯಾತ್ಮಿಕ ಕ್ಷೇತ್ರದ ಉನ್ನತಿಯ ಜೊತೆ ಅನ್ನ, ಅಕ್ಷರದಅರಿವುಮೂಡಿಸಲುಬಾಲಗಂಗಾಧರನಾಥ ಶ್ರೀಗಳು ದೂರದೃಷ್ಟಿ ಹೊಂದಿದ ಫಲವಾಗಿ ನನ್ನಂತಹ ಸಹಸ್ರಾರು ಮಂದಿ ಉನ್ನತ ಶಿಕ್ಷಣ ಪಡೆಯಲು ಸಾಧ್ಯವಾಯಿತು. ಇಲ್ಲದಿದ್ದರೆ ಹಲವರ ಬದುಕುಬೀದಿಪಾಲಾಗುತ್ತಿತ್ತು ಎಂದು ಹೇಳಿದರು.

ಹೆಮ್ಮರವಾಗಿ ಬೆಳೆದು ನಿಂತಿರುವ ಶ್ರೀಮಠದ ಫಲ ಭಕ್ತರಿಗೆ ಮತ್ತಷ್ಟು ವಿಸ್ತ್ರತವಾಗಿ ದೊರೆಯಬೇಕೆಂಬ ಡಾ.ನಿರ್ಮಲಾನಂದನಾಥ ಶ್ರೀಗಳ ಅಭಿಲಾಷೆಯಂತೆ ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದ ಉನ್ನತಿಗೆ ಶ್ರೀಮಠ ಪ್ರೇರೇಪಿಸುತ್ತಿರುವುದರಿಂದ ಇಂದು ಶ್ರೀಮಠವನ್ನು ಅವಲೋಕಿಸುವ ಕೌತುಕತೆ ದೇಶದೆಲ್ಲೆಡೆ ಸಾಗಿದೆ ಎಂದರು.

ಕೊಮ್ಮೇರಹಳ್ಳಿ ವಿಶ್ವಮಾನವ ಕ್ಷೇತ್ರದ ಶ್ರೀ ಪುರುಷೋತ್ತಮಾನಂದನಾಥ ಸ್ವಾಮೀಜಿ ಮಾತನಾಡಿ, ಶ್ರೀಮಠಕ್ಕೆ ಸಾವಿರ ವರ್ಷಗಳ ಇತಿಹಾಸವಿದೆ. ಸಾಕ್ಷಾತ್ ಶಿವನೇ ತಪಸ್ಸು ಮಾಡಿದ ಪವಿತ್ರ ಸ್ಥಳ ಎಂದು ಆದಿಚುಂಚನಗಿರಿಯನ್ನು ದಾಖಲಿಸಲಾಗಿದೆ. ಜಿಲ್ಲೆಯ ರೈತರ ಬಳುವಳಿಯನ್ನು ಸದ್ಬಳಕೆ ಮಾಡಿಕೊಂಡು ಶಿಕ್ಷಣ ಕ್ಷೇತ್ರವನ್ನು ಹೆಮ್ಮರವಾಗಿ ಬೆಳೆಸಲು ಬಾಲಗಂಗಾಧರನಾಥ ಶ್ರೀಗಳು ಹಲವು ಶಿಕ್ಷಣ ಸಂಸ್ಥೆಗಳನ್ನು ಹುಟ್ಟು ಹಾಕಿದ್ದಾರೆ ಎಂದರು. ಓಂಕಾರಾಶ್ರಮದ ಶ್ರೀ ಮಧುಸೂಧನಾನಂದಪುರಿ ಸ್ವಾಮೀಜಿ, ನೆಲಮಂಗಲ ಶನಿಮಹಾತ್ಮ ದೇವಾಲಯದ ಹನುಮಂತಪ್ಪ ಸ್ವಾಮಿ, ಕಾಗಿನೆಲೆ ಪೀಠದ ಶ್ರೀ ಶಿವಾನಂದಪುರಿಸ್ವಾಮೀಜಿ,ಕಬೀರಾನಂದಾಶ್ರಮದ ಶ್ರೀ ಶಿವಲಿಂಗಾನಂದ ಸ್ವಾಮೀಜಿ, ಅನ್ನದಾನೇಶ್ವರನಾಥ ಸ್ವಾಮೀಜಿ ಸೇರಿದಂತೆ ಹಲವು ಮಠಗಳ ಮಠಾಧಿಪತಿಗಳು, ಸಚಿವ ಎನ್.ಚಲುವರಾಯಸ್ವಾಮಿ, ಶಾಸಕರಾದ ಪಿ.ರವಿಕುಮಾರ್, ಕೆ.ವಿವೇಕಾನಂದ, ಮಾಜಿಶಾಸಕರಾದಡಿ.ಸಿ.ತಮ್ಮಣ್ಣ, ಕೆ.ಬಿ.ಚಂದ್ರಶೇಖರ್, ಎಸ್‌ಬಿ ಎಜುಕೇಷನ್ ಟ್ರಸ್ಟ್‌ನ ಡಾ. ಶಿವಲಿಂಗಯ್ಯ, ಮೀರಾ ಶಿವಲಿಂಗಯ್ಯ, ಯುವ ಮುಖಂಡ ಸಚ್ಚಿದಾನಂದ, ಪಿಇಟಿ ಅಧ್ಯಕ್ಷ ವಿಜಯ್ ಆನಂದ್ ಇತರರು ಭಾಗವಹಿಸಿದ್ದರು.

ಕನ್ನಡಪ್ರಭ
ಶುಕ್ರವಾರ 8.05.2026

ಗರಿಷ್ಠ 34°C ಕನಿಷ್ಠ 23°C

ಸುದ್ದಿ ಸಿಂಚನ

ವ್ಯವಸ್ಥಾಪನಾ ಸಮಿತಿ ನೂತನ ಅಧ್ಯಕ್ಷರಾಗಿ ಗುರು ನಾಗೇಂದ್ರ ದತ್ತ ಆಯ್ಕೆ



ಶ್ರೀರಂಗಪಟ್ಟಣ: ಪಟ್ಟಣದ ಇತಿಹಾಸ ಪ್ರಸಿದ್ಧ ಶ್ರೀರಂಗನಾಥ ಸ್ವಾಮಿ ದೇವಾಲಯದ ವ್ಯವಸ್ಥಾಪನ ಸಮಿತಿ ನೂತನ ಅಧ್ಯಕ್ಷರಾಗಿ ಗುರು ನಾಗೇಂದ್ರ ದತ್ತ ಅವಿರೋಧವಾಗಿ ಆಯ್ಕೆಯಾದರು. ನಿಕಟ ಪೂರ್ವ ಅಧ್ಯಕ್ಷ ಜೆ.ಸೋಮಶೇಖರ್‌ಅವರ ರಾಜೀನಾಮೆಯಿಂದ ತೆರವಾದ ಸ್ಥಾನಕ್ಕೆ ಚುನಾವಣೆ ನಡೆದು 9 ಮಂದಿ ಸದಸ್ಯರಲ್ಲಿ ಗುರು ನಾಗೇಂದ್ರ ದತ್ತ ಒಬ್ಬರೇ ಅಧ್ಯಕ್ಷಗಾದಿಗೆ ಅರ್ಜಿ ಸಲ್ಲಿಸಿದ ಹಿನ್ನೆಲೆ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ದೇವಾಲಯದ ಕಾರ್ಯ ನಿರ್ವಹಣಾಧಿಕಾರಿ ಉಮಾ ಘೋಷಣೆ ಮಾಡಿದರು. ಈ ವೇಳೆ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಎಂ.ಎಲ್.ದಿನೇಶ್, ಟಿಎಪಿಸಿಎಂಎಸ್ ನಿರ್ದೇಶಕ ಎಂ.ನಂದೀಶ್, ಸಮಿತಿ ಸದಸ್ಯರಾದ ದೇವಾಲಯದ ಮುಖ್ಯ ಅರ್ಚಕ ವಿಜಯಸಾರಥಿ, ಆಶಾಲತಾ ಪುಟ್ಟೇಗೌಡ, ಜೆ.ಸೋಮಶೇಖರ್, ಆನಂದ್, ಸತೀಶ್, ಮಹದೇವು, ಎಂ.ಎಲ್ ದಿವಾಕರ್, ರಘು, ಪ್ರದೀಪ್, ರವಿಕುಮಾರ್, ದೇವಾಲಯದ ಸಿಬ್ಬಂದಿ ರಘು ಸೇರಿ ಇತರರು ನೂತನ ಅಧ್ಯಕ್ಷರನ್ನು ಅಭಿನಂದಿಸಿದರು.

ಒಂದು ಕೆಜಿ ಗಾಂಜಾ ಸೊಪ್ಪು ವಶ: ಆರೋಪಿಗಳ ಬಂಧನ

ಹಲಗೂರು: ಅಕ್ರಮವಾಗಿ ಮಾರಾಟ ಮಾಡಲು ತಂದಿದ್ದ ಗಾಂಜಾ ಸೊಪ್ಪನ್ನು ಬುಧವಾರ ಮಧ್ಯಾಹ್ನ ಹಲಗೂರು ಪೊಲೀಸರು ವಶಕ್ಕೆ ಪಡೆದು ಇಬ್ಬರು ಆರೋಪಿಗಳನ್ನು ಬಂಧಿಸಿದ್ದಾರೆ. ಚಾಮರಾಜನಗರ ಜಿಲ್ಲೆಯ ಹನೂರು ತಾಲೂಕಿನ ಗಾಣಿಗ ಮಂಗಲ ಗ್ರಾಮದ ರಾಜಪ್ಪ ಮತ್ತು ಬೆಂಗಳೂರು ದಕ್ಷಿಣ ಜಿಲ್ಲೆಯ ಕನಕಪುರ ತಾಲೂಕಿನ ನಾಗರಸನಕೋಟೆ ಗ್ರಾಮದ ಎನ್.ವಿ.ಯೋಗೇಶ್ ಬಂಧಿತ ಆರೋಪಿಗಳು. ಹಲಗೂರು ಸಮೀಪದ ಗುಂಡಾಪುರ ಮತ್ತು ದಳವಾಯಿ ಕೋಡಿಹಳ್ಳಿ ಮಧ್ಯೆ ಇರುವ ಬೆಂಗಳೂರು ನೀರು ಸರಬರಾಜು ಪೈಪ್ ಲೈನ್ ರಸ್ತೆಯಲ್ಲಿ ಗಾಂಜಾ ಸೊಪ್ಪು ಮಾರಾಟ ಮಾಡಲು ಕಾಯುತ್ತಿದ್ದರು. ಈ ಬಗ್ಗೆ ಖಚಿತ ಮಾಹಿತಿ ಪಡೆದ ಪೊಲೀಸರು ದಾಳಿ ಮಾಡಿದ್ದು ಆರೋಪಿಗಳಿಂದ ಮಾರಾಟ ಮಾಡಲು ತಂದಿದ್ದ 1.06 ಕಿ.ಗ್ರಾಂ. ಗಾಂಜಾ ಸೊಪ್ಪನ್ನು ವಶಕ್ಕೆ ಪಡೆದಿದ್ದು, ಇಬ್ಬರು ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಕಳುಹಿಸಲಾಗಿದೆ.

ರೈಲಿಗೆ ಸಿಕ್ಕು ವ್ಯಕ್ತಿ ಸಾವು

ಮೈಸೂರು: ಮಂಡ್ಯ ಜಿಲ್ಲೆ ಶ್ರೀರಂಗಪಟ್ಟಣ ರೈಲು ನಿಲ್ದಾಣದ ವೇದಿಕೆ ನಂ.2 ರಲ್ಲಿ 70 ವರ್ಷದ ಅಪರಿಚಿತ ವ್ಯಕ್ತಿ ರೈಲಿಗೆ ಸಿಕ್ಕಿ ಮೃತಪಟ್ಟಿರುವ ಘಟನೆ ಸೋಮವಾರ ನಡೆದಿದೆ. ಮೃತದೇಹವನ್ನು ಮಂಡ್ಯ ಜಿಲ್ಲಾ ಸರ್ಕಾರಿ ಆಸ್ಪತ್ರೆಯ ಶವಾಗಾರದಲ್ಲಿ ಇರಿಸಲಾಗಿದೆ. ಮೃತರ ಚಹರೆ– 5 ಅಡಿ ಎತ್ತರ, ಸಾಧಾರಣ ಶರೀರ, ಗೋಧಿ ಮೈಬಣ್ಣ, ಕೋಲು ಮುಖ, ಉದ್ದ ಮೂಗು, ತಲೆ ಮುಂಭಾಗ ಬೋಳಾಗಿದ್ದು, ತಲೆಯಲ್ಲಿ 1 ಇಂಚು ಬಿಳಿ ಕೂದಲಿದೆ. ಗಡ್ಡ ಮೀಸೆ ಬಿಟ್ಟಿದ್ದಾರೆ. ಬಲ ತೊಡೆಯಲ್ಲಿ ಕಪ್ಪು ಮಚ್ಚೆ ಇದೆ. ಬಿಳಿ ಶರ್ಟ್, ಬನಿಯನ್, ಅಂಡರ್ ವೇರ್‌ಧರಿಸಿದ್ದಾರೆ. ಮೃತರ ವಾರಸುದಾರರು 0821–2516579, 94808 02122 ಸಂಪರ್ಕಿಸಬಹುದು

ಟಿ.ಕೆ.ರಾಮು ನಿಧನ



ಮದ್ದೂರು: ಮಾಜಿ ಶಾಸಕರಾದ ದಿ. ಎಂ.ಮಂಚೇಗೌಡ ಹಾಗೂ ಜಯ ವಾಣಿ ಮಂಚೇಗೌಡರ ಅಳಿಯ, ನಿವೃತ್ತ ಇಂಜಿನಿಯರ್‌ಟಿ.ಕೆ.ರಾಮು (78) ಹೃದಯಾಘಾತ ದಿಂದ ಬುಧವಾರ ನಿಧನರಾದರು. ಇವರು ಪುತ್ರಿ ಸ್ಮಿತಾ ದರ್ಶನ್, ಪುತ್ರ ಅಜಯ್ ಸೇರಿ ಅಪಾರ ಕುಟುಂಬ ವರ್ಗದವರನ್ನು ಅಗಲಿದ್ದಾರೆ. ಪಾರ್ಥಿವ ಶರೀರವನ್ನು ಮೃತರ ನಿವಾಸ ಹಾಗೂ ಮಾವನ ಮನೆಯಲ್ಲಿ ಸಾರ್ವಜನಿಕ ಅಂತಿಮ ದರ್ಶನಕ್ಕೆ ಇಟ್ಟು ನಂತರ ಹುಟ್ಟೂರು ತೈಲೂರು ಗ್ರಾಮದಲ್ಲಿ ಶುಕ್ರವಾರ ಬೆಳಗ್ಗೆ ಅಂತ್ಯಕ್ರಿಯೆ ನೆರವೇರಿಸಲಾಯಿತು.

ಜನರೊಂದಿಗೆ ಜನತಾದಳ, ಜೆಡಿಎಸ್ ಪಕ್ಷದ ರಜತಮಹೋತ್ಸವ ಸಂಭ್ರಮ

ಕರಾವಳಿ, ಕಲ್ಯಾಣದಲ್ಲಿ ಪಕ್ಷ ಸಂಘಟನೆ

ಜೆಡಿಎಸ್ ಕೇವಲ ಹಳೇ ಮೈಸೂರಿಗೆ ಸೀಮಿತವಾದ ಪಕ್ಷವಲ್ಲ | ಎಚ್‌ಡಿಕೆ ಅವಧೀಲಿ ಕರ್ನಾಟಕ ರಾಮರಾಜ್ಯವಾಗಿತ್ತು: ನಿಖಿಲ್





ಪಾಂಡವಪುರದ ಪಾಂಡವ ಕ್ರೀಡಾಂಗಣದ ಬಳಿ ಆಯೋಜಿಸಿದ್ದ ಜನರೊಂದಿಗೆ ಜನತಾದಳ ಹಾಗೂ ಪಕ್ಷದ ರಜತ ಮಹೋತ್ಸವ ಸಮಾರಂಭವನ್ನು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಉದ್ಘಾಟಿಸಿದರು. ಮಾಜಿ ಸಚಿವ ಸಿ.ಎಸ್.ಪುಟ್ಟರಾಜು, ಕೋರ್‌ಕಮಿಟಿ ಸದಸ್ಯ ಕೃಷ್ಣಾರೆಡ್ಡಿ ಸೇರಿದಂತೆ ಇತರರಿದ್ದರು(ಎಡಚಿತ್ರ). ಜೆಡಿಎಸ್ ಪಕ್ಷದ ಬೆಳ್ಳಿಹಬ್ಬದ ಸಂಭ್ರಮದ ಮೆರವಣಿಗೆಯಲ್ಲಿ ಸಹಸ್ರಾರು ಜನರು ಭಾಗವಹಿಸಿರುವುದು.

• **ಕನ್ನಡಪ್ರಭ ವಾರ್ತೆ** ಪಾಂಡವಪುರ

ಜೆಡಿಎಸ್ ಹಳೇ ಮೈಸೂರಿಗೆ ಸೀಮಿತವಾದ ಪಕ್ಷ ಎಂಬ ಭಾವನೆ ಇದೆ. ಅದನ್ನು ದೂರ ಮಾಡುವ ಉದ್ದೇಶದಿಂದ ಕಲ್ಯಾಣ ಕರ್ನಾಟಕ, ಕಿತ್ತೂರು ಕರ್ನಾಟಕ, ಕರಾವಳಿಯಾದ್ಯಂತ ಸಂಚರಿಸಿ ಪಕ್ಷಕ್ಕೆ ಶಕ್ತಿ ತುಂಬುವ ಪ್ರಯತ್ನ ಮಾಡುತ್ತಿದ್ದೇನೆ ಎಂದು ಜೆಡಿಎಸ್ ಯುವಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಹೇಳಿದರು.

ಗುರುವಾರ ಪಟ್ಟಣದ ಪಾಂಡವ ಕ್ರೀಡಾಂಗಣದ ಬಳಿ ಜನರೊಂದಿಗೆ ಜನತಾದಳ ಹಾಗೂ ಜೆಡಿಎಸ್ ಪಕ್ಷದ 25ನೇ ವರ್ಷದ ಬೆಳ್ಳಿಹಬ್ಬದ ಸಂಭ್ರಮ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಜನತಾದಳವನ್ನು ಅನೇಕ ಹಿರಿಯರು ಯಾವುದೇ ಸ್ವಾರ್ಥವಿಲ್ಲದೆ ನಿಸ್ವಾರ್ಥ ಭಾವನೆಯಿಂದ ಕಟ್ಟಿದ್ದಾರೆ. ಕನ್ನಡ ನಾಡಿನ ಅಸ್ಮಿತೆಯ ಉಳಿವಿಗಾಗಿ ಹುಟ್ಟಿದ ಪಕ್ಷ. ನಾಡಿನ ನೆಲ– ಜಲ, ಭಾಷೆ ಮತ್ತು ಜನಪರ ಚಳವಳಿ ಮತ್ತು ಹೋರಾಟದಿಂದಲೇ ಜನತಾದಳ ಪ್ರಾದೇಶಿಕ ಪಕ್ಷವಾಗಿ ಬೆಳೆದುಬಂದಿರುವುದು ಇತಿಹಾಸವಾಗಿದೆ ಎಂದು ನುಡಿದರು.

ದೇವೇಗೌಡರ ಹೋರಾಟ ಕಿಚ್ಚು ನಮಗೆ ಸ್ಫೂರ್ತಿ: 93ರ ಇಳಿ ವಯಸ್ಸಿನಲ್ಲೂ ದೇವೇಗೌಡರ ಹೋರಾಟದ ಕಿಚ್ಚು ಕಡಿಮೆಯಾಗಿಲ್ಲ. ನೀರಾವರಿ ಯೋಜನೆಗಳ ಬಗ್ಗೆ ಅವರಿಗಿರುವ ತಿಳಿವಳಿಕೆ, ರಾಜ್ಯದ ಪರ ನಿಲುವು ಇಂದಿನ ಯುವಕರಿಗೆ ಸ್ಫೂರ್ತಿಯಾಗಿದೆ. ಜೆಡಿಎಸ್ ಜಿಲ್ಲೆಯಲ್ಲಿ ಮಾತ್ರವಲ್ಲದೆ ರಾಜ್ಯದಲ್ಲಿ ಗಟ್ಟಿಯಾಗಿದೆ. ಕಾರ್ಯಕರ್ತರು ಪಕ್ಷದ ದೊಡ್ಡ ಶಕ್ತಿಯಾಗಿದ್ದಾರೆ ಎಂದು ವಿಶ್ವಾಸದಿಂದ ಹೇಳಿದರು.

2018 ಎಚ್.ಡಿ.ಕುಮಾರಸ್ವಾಮಿ ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಕರ್ನಾಟಕ ರಾಮರಾಜ್ಯವಾಗಿತ್ತು. ಆ ಸಮಯದಲ್ಲಿ ರೈತರ ₹2,600 ಕೋಟಿ ಸಾಲ ಮನ್ನಾ ಮಾಡಿ ರೈತರ ಮೇಲಿನ ಆರ್ಥಿಕ ಹೊರೆ ಇಳಿಸಿದ್ದರು. ರೈತರ ಆತ್ಮಹತ್ಯೆಯನ್ನು ತಡೆಗಟ್ಟುವಲ್ಲಿ ಯಶಸ್ವಿಯಾಗಿದ್ದರು ಎಂದು ಬಣ್ಣಿಸಿದರು.

ನನ್ನ ರಾಜಕಾರಣ ಮಂಡ್ಯದಿಂದಲೇ ಆರಂಭಗೊಂಡಿತು. ಅಂದಿನ ನಿಖಿಲ್‌ಗೂ ಇಂದಿನ ನಿಖಿಲ್‌ಗೂ ವ್ಯತ್ಯಾಸಗಳಿವೆ. ಚುನಾವಣೆಯಲ್ಲಿ ಏಳು– ಬೀಳುಗಳು ಸಹಜ. ಸೋಲುಗಳಿಂದ ನನಗೆ ರಾಜಕೀಯ ಪಕ್ವತೆ ಬಂದಿದೆ. ಜನರು ನನ್ನನ್ನು ಚುನಾವಣೆಯಲ್ಲಿ ಸೋಲಿಸಿದರೂ ನಾನು ಹೋದಲ್ಲೆಲ್ಲಾ ಅಕ್ಕರೆ, ಪ್ರೀತಿ, ವಿಶ್ವಾಸವನ್ನು ತೋರಿಸುತ್ತಿದ್ದಾರೆ. ದೇವೇಗೌಡರು, ಕುಮಾರಸ್ವಾಮಿ ಅವರು ಈ ಜಿಲ್ಲೆಯವರಾಗದಿದ್ದರೂ ಹಲವು ರೈತಪರ– ಜನಪರ ಹೋರಾಟಗಳಿಂದಲೇ ಜಿಲ್ಲೆಯ ಜನರ ಮನಸ್ಸನ್ನು ಗೆದ್ದಿದ್ದಾರೆ. ಅದನ್ನು ಉಳಿಸಿಕೊಂಡು ಹೋಗಬೇಕಿರುವುದು ನಮ್ಮೆಲ್ಲರ ಜವಾಬ್ದಾರಿಯಾಗಿದೆ ಎಂದು ತಿಳಿಸಿದರು.

ಒಗ್ಗಟ್ಟಾಗಿ ಪಕ್ಷವನ್ನು ಮುನ್ನಡೆಸಿ: ಜೆಡಿಎಸ್‌ಗೆ ಈಗ 25 ವರ್ಷವಾಗಿದೆ. ಪಕ್ಷ ಸುವರ್ಣ ಮಹೋತ್ಸವ ಆಚರಿಸಬೇಕಾದರೆ ಜನಪರವಾದ ಹೋರಾಟ ಮತ್ತು ಬದ್ಧತೆಯಿಂದ ಎಲ್ಲರೂ ಮುನ್ನಡೆಯಬೇಕಿದೆ. ರಾಜ್ಯದಲ್ಲಿ ಪಕ್ಷ ಯಶಸ್ಸು ಕಾಣುತ್ತಿದೆ. ನಾವೆಲ್ಲರೂ ಒಗ್ಗಟ್ಟಾಗಿ ಪಕ್ಷವನ್ನು ಬಲ ಪಡಿಸುವ ಕೆಲಸ ಮಾಡಬೇಕಿದೆ. ಜಿಲ್ಲೆಯ ಅಭಿವೃದ್ಧಿಗೆ ಎಲ್ಲರೂ ಹೆಗಲುಕೊಟ್ಟು ನಿಲ್ಲಬೇಕಿದೆ. ಅದಕ್ಕಾಗಿ ಜೆಡಿಎಸ್‌ನ ಮಾಜಿ ಶಾಸಕರಿಗೆ ಜನರು ಆಶೀರ್ವಾದ ಮಾಡಬೇಕು ಎಂದು ಜನರಲ್ಲಿ ಮನವಿ ಮಾಡಿದರು.

2024ರಲ್ಲಿ ಜಿಲ್ಲೆಯ ಜನರು ನೀಡಿದ ಅಭೂತಪೂರ್ವ ಬೆಂಬಲದಿಂದ ಎಚ್.ಡಿ.ಕುಮಾರಸ್ವಾಮಿ ಅವರು ಕೇಂದ್ರದಲ್ಲಿ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವರಾದರು. ಜನರ



ನೆರೆದಿದ್ದ ಸಾವಿರಾರು ಜನರನ್ನುದ್ದೇಶಿಸಿ ನಿಖಿಲ್ ಕುಮಾರಸ್ವಾಮಿ ಭಾಷಣ.

ಋಣ ತೀರಿಸುವ ಹಂಬಲದೊಂದಿಗೆ ಕೈಗಾರಿಕೆ ಸ್ಥಾಪನೆಗೆ ರಾಜ್ಯಸರ್ಕಾರದ ಬಳಿ 500 ಎಕರೆ ಜಾಗ ಕೋರಿದ್ದಾರೆ, ಜಿಲ್ಲೆಯಲ್ಲಿ ಬಡವರು ಹಾಗೂ ಮಧ್ಯಮ ವರ್ಗಕ್ಕೆ ಸೇರಿದ ಪ್ರತಿಭಾವಂತ ವಿದ್ಯಾರ್ಥಿಗಳಿದ್ದಾರೆ. ಅವರೆಲ್ಲರೂ ಉದ್ಯೋಗವಿಲ್ಲದೆ ಅಲೆದಾಡುತ್ತಿರುವುದು ದುರದೃಷ್ಟಕರ ಸಂಗತಿಯಾಗಿದೆ. ಆದರೆ, ಕಾಂಗ್ರೆಸ್ ಸರ್ಕಾರ 500 ಎಕರೆ ಭೂಮಿಯನ್ನು ದೊರಕಿಸಿಕೊಡುವುದಕ್ಕೆ ಸ್ಪಂದಿಸುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸರ್ಕಾರಕ್ಕೆ ರೈತರ ಬಗ್ಗೆ ಚಿಂತೆಯಿಲ್ಲ: ರಾಜ್ಯದಲ್ಲಿ 3 ಸಾವಿರ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಜಿಲ್ಲೆಯಲ್ಲಿ 97 ರೈತರು ಆತ್ಮಹತ್ಯೆಗೆ ಶರಣಾಗಿದ್ದಾರೆ. ಆದರೂ ಈ ಸರ್ಕಾರಕ್ಕೆ ರೈತರ ಬಗ್ಗೆ ಚಿಂತೆಯಿಲ್ಲ. ಕಳೆದ ವರ್ಷ ಉತ್ತರ ಕರ್ನಾಟಕದಲ್ಲಿ ಮಳೆಯಿಂದ ಹಾನಿಗೊಳಗಾದ ಪ್ರದೇಶಗಳಿಗೆ ಕಾಂಗ್ರೆಸ್‌ನವರು ಹೋಗಲೂ ಇಲ್ಲ, ಸಾಂತ್ವನವನ್ನೂ ಹೇಳಲಿಲ್ಲ ಎಂದು ಟೀಕಿಸಿದರು.

2028ಕ್ಕೆ ರಾಜ್ಯದಲ್ಲಿ ಜೆಡಿಎಸ್– ಬಿಜೆಪಿ ಮೈತ್ರಿಕೂಟ ರಚನೆಯಾಗಬೇಕು. ಕುಮಾರಸ್ವಾಮಿ ಅವರು ಮತ್ತೊಮ್ಮೆ ಮುಖ್ಯಮಂತ್ರಿಯಾಗಬೇಕು ಎನ್ನುವುದು ರಾಜ್ಯದ ಆರೂವರೆ ಕೋಟಿ ಕನ್ನಡಿಗರ ಭಾವನೆಯಾಗಿದೆ. ಅದಕ್ಕಾಗಿ ಈಗಿನಿಂದಲೇ ಮುಖಂಡರು– ಕಾರ್ಯಕರ್ತರು ಪಕ್ಷ ಸಂಘಟನೆಯಲ್ಲಿ ತೊಡಗಬೇಕು. ನಗರಸಭೆ, ಪುರಸಭೆ, ಪಟ್ಟಣ ಪಂಚಾಯಿತಿ, ಜಿಲ್ಲಾ ಪಂಚಾಯಿತಿ, ತಾಲೂಕು ಪಂಚಾಯಿತಿ, ಗ್ರಾಮಪಂಚಾಯಿತಿ ಚುನಾವಣೆಗಳಲ್ಲಿ ಪಕ್ಷವನ್ನು ಹೆಚ್ಚಿನ ಸಂಖ್ಯೆಯಲ್ಲಿ ಅಧಿಕಾರ ಹಿಡಿಯುವಂತೆ ಮಾಡಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಮಾಜಿ ಸಚಿವರಾದ ಸಿ.ಎಸ್.ಪುಟ್ಟರಾಜು, ಡಿ.ಸಿ.ತಮ್ಮಣ್ಣ, ಸಾ.ರಾ.ಮಹೇಶ್, ರಾಜ್ಯ ಎಸ್ಸಿ– ಎಸ್ಟಿ ವಿಭಾಗದ ಅಧ್ಯಕ್ಷ ಡಾ.ಕೆ. ಅನ್ನದಾನಿ, ಜೆಡಿಎಸ್ ಕೋರ್‌ಕಮಿಟಿ ಅಧ್ಯಕ್ಷ ಕೃಷ್ಣಾರೆಡ್ಡಿ, ವಿಧಾನಪರಿಷತ್ ಸದಸ್ಯ ಮಂಜೇಗೌಡ, ಮಾಜಿ ಶಾಸಕ ಜಿ.ಬಿ.ಶಿವಕುಮಾರ್, ಜೆಡಿಎಸ್ ಜಿಲ್ಲಾಧ್ಯಕ್ಷ ಡಿ.ರಮೇಶ್, ಮುಖಂಡರಾದ ಬಿ.ಆರ್. ರಾಮಚಂದ್ರ, ಯುವ ಜನತಾದಳದ ಜಿಲ್ಲಾಧ್ಯಕ್ಷ ಕಂಸಾಗರ ರವಿ, ಜೆಡಿಎಸ್ ಜಿಲ್ಲಾ ಮಹಿಳಾಧ್ಯಕ್ಷೆ ಮಂಜುಳಾ, ಉಪಾಧ್ಯಕ್ಷೆ ಅನುಪಮಾ, ಮೇಲುಕೋಟೆ ವಿಧಾನಸಭೆ ಕ್ಷೇತ್ರದ ಅಧ್ಯಕ್ಷ ಮಲ್ಲೇಶ್, ಎಚ್. ಮಂಜುನಾಥ, ಇಮ್ರಾನ್, ಅಣ್ಣೇಗೌಡ ಅಶ್ವತ್ಥ್, ಪೈಲ್ವಾನ್ ಮುಕುಂದ, ಚಂದ್ರಶೇಖರ್ ಇತರರಿದ್ದರು.

ರಾಜ್ಯದ ಮುಂದಿನ ಆಶಾಕಿರಣ ನಿಖಿಲ್ ಕುಮಾರಸ್ವಾಮಿ

ನನ್ನ ಕೊನೆಯ ಉಸಿರಿರುವತನಕ ಜನರ ಜೊತೆಗಿರುವೆ: ಮಾಜಿ ಸಚಿವ ಸಿ.ಎಸ್.ಪುಟ್ಟರಾಜು

• **ಕನ್ನಡಪ್ರಭ ವಾರ್ತೆ** ಪಾಂಡವಪುರ

ತಮಿಳುನಾಡು ವಿಧಾನಸಭಾ ಚುನಾವಣೆಯಲ್ಲಿ ನಟ ವಿಜಯ್ ಸುನಾಮಿಯಂತೆ ಮೇಲೆದ್ದು ಬಂದಂತೆ 2028ರ ಚುನಾವಣೆಯಲ್ಲಿ ದೇವೇಗೌಡರ ವಂಶದ ಕುಡಿ ಮೇಲೆದ್ದು ಬರಲಿದೆ ಎಂದು ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಭವಿಷ್ಯ ನುಡಿದರು.

ಪಟ್ಟಣದಲ್ಲಿ ಗುರುವಾರ ನಡೆದ ಜನರೊಂದಿಗೆ ಜನತಾದಳ ಮತ್ತು ಜೆಡಿಎಸ್ 25ನೇ ವರ್ಷದ ಸಂಭ್ರಮಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿ, ನಿಖಿಲ್ ಮೇಲೆ ದೈವಶಕ್ತಿ ಇದೆ, ನಿಖಿಲ್ ಅವರು ರಾಜ್ಯದಲ್ಲಿ ಜೆಡಿಎಸ್ ಅಲೆ ಎಬ್ಬಿಸಿ ಪಕ್ಷವನ್ನು ಅಧಿಕಾರಕ್ಕೆ ತರುವ ಶಕ್ತಿ ಅವರಿಗಿದೆ. ಅದಕ್ಕಾಗಿ ಪಾಂಡವರು ಹೋರಾಡಿದ ಮಣ್ಣಿನಿಂದಲೇ ಅದಕ್ಕೆ ಚಾಲನೆಯನ್ನು ನೀಡಿದ್ದಾರೆ. ಮುಂದಿನ ಚುನಾವಣೆಯಲ್ಲಿ ಗೆದ್ದುಬಂದು ರಾಜ್ಯದ ಆಶಾಕಿರಣವಾಗಲಿದ್ದಾರೆ. ಅವರಿಂದ ಹೊಸದೊಂದು ಅಧ್ಯಾಯ ಶುರುವಾಗಲಿದೆ ಎಂದು ವಿಶ್ವಾಸದಿಂದ ನುಡಿದರು.

ದೇವೇಗೌಡರು 1983ರಲ್ಲಿ ಪಕ್ಷವನ್ನು ಸ್ವತಂತ್ರವಾಗಿ ಅಧಿಕಾರಕ್ಕೆ ತಂದರು. 1991ರಲ್ಲಿ ಯುವ ಜನತಾದಳದ ಪ್ರಧಾನ ಕಾರ್ಯದರ್ಶಿಯಾಗಿ 1994ರಲ್ಲಿ ಜಿಲ್ಲಾ ಪಂಚಾಯಿತಿ ಸದಸ್ಯನಾಗಿ ಶಾಸಕನಂತೆ ಕೆಲಸ ಮಾಡಿದೆ. 1998ರಲ್ಲಿ ರಾಮನಗರದಲ್ಲಿ ಅಂಬರೀಶ್ ಗೆಲ್ಲಲಾಗದೆ ಸೋತರು, ಅವರನ್ನು ಎಸ್.ಡಿ.ಜಯರಾಂ ಮಂಡ್ಯಕ್ಕೆ ಕರೆತಂದು ಲೋಕಸಭೆಯಿಂದ ಕಣಕ್ಕಿಳಿಸಿ ಗೆಲ್ಲಿಸಿದರು. ಅಂಬರೀಶ್ ಕಾಂಗ್ರೆಸ್ ಪಕ್ಷ ಸೇರಿಕೊಂಡಾಗ



ನನ್ನನ್ನೂ ಬಲವಂತವಾಗಿ ಪಕ್ಷಕ್ಕೆ ಸೇರಿಸಿಕೊಳ್ಳುವ ಪ್ರಯತ್ನ ನಡೆಸಿದ್ದರು. ಆಗ ಪಕ್ಷದ ಕಾರ್ಯಕರ್ತರು, ಅಭಿಮಾನಿಗಳು ನೀವೇನಾದರೂ ಕಾಂಗ್ರೆಸ್ ಸೇರಿದರೆ ವಿಷ ಕುಡಿಯುವುದಾಗಿ ಧಮಕಿ ಹಾಕಿದರು. ಆಗ ನಾನು ಜೆಡಿಎಸ್ ಬಿಟ್ಟು ಯಾವುದೇ ಪಕ್ಷವನ್ನು ಸೇರುವುದಿಲ್ಲ ಎಂದು ಖಡಕ್ಕಾಗಿ ಹೇಳಿ ಬಂದಿದ್ದಾಗಿ ತಿಳಿಸಿದರು.

ಕೆಲವರು ನನ್ನ ಬಗ್ಗೆ ಅಪಪ್ರಚಾರ ಮಾಡುತ್ತಿದ್ದಾರೆ. ಸಮಸ್ಯೆ ಇದ್ದರೆ ಪಕ್ಷದ ಚೌಕಟ್ಟಿನಲ್ಲಿ ಚರ್ಚೆ ಆಗಬೇಕು. ನಮ್ಮ ಪಕ್ಷದ ಕೋರ್‌ಕಮಿಟಿ ಇದೆ, ಅಲ್ಲಿ ಮಾತನಾಡಬೇಕು. ಅದನ್ನು ಬಿಟ್ಟು ಸಾರ್ವಜನಿಕವಾಗಿ ಮಾತನಾಡುವುದು ಪಕ್ಷಕ್ಕೂ ಒಳ್ಳೆಯದಲ್ಲ, ಅವರಿಗೂ ಒಳ್ಳೆಯದಲ್ಲ ಎಂದು

> **2004ರಲ್ಲಿ ನನಗೆ ಈ ಕ್ಷೇತ್ರದ ಶಾಸಕನಾಗಿ ಜವಾಬ್ದಾರಿ ಸಿಕ್ಕಿತು. 2013ರಲ್ಲಿ ನಾನು ಮತ್ತೆ ಸೋತೆ. 2014ರ ಲೋಕಸಭೆ ಉಪ ಚುನಾವಣೆಯಲ್ಲಿ ರಮ್ಯಾ ವಿರುದ್ಧ ಸೋತೆ. ಮತ್ತೆ ನಡೆದ ಸಾರ್ವತ್ರಿಕ ಲೋಕಸಭಾ ಚುನಾವಣೆಯಲ್ಲಿ ರಮ್ಯಾ ವಿರುದ್ಧವೇ ಗೆದ್ದು ದೇವೇಗೌಡರೊಂದಿಗೆ ಲೋಕಸಭೆ ಪ್ರವೇಶಿಸಿದೆ. 2018ರಲ್ಲಿ ಸಂಸದನಾಗಿದ್ದುಕೊಂಡೇ ಶಾಸಕರನ್ನು ಗೆಲ್ಲಿಸಿದೆ. ನನ್ನ ಕೊನೆಯ ಉಸಿರು ಇರೋವರೆಗೆ ಜನರ ಜೊತೆ ಇರುತ್ತೇನೆ.**
> • **ಸಿ.ಎಸ್.ಪುಟ್ಟರಾಜು,** ಮಾಜಿ ಸಚಿವ

ತಮ್ಮ ವಿರುದ್ಧ ಇತ್ತೀಚೆಗಷ್ಟೇ ಆಕ್ರೋಶ ಹೊರ ಹಾಕಿದ್ದ ಶಾಸಕ ರವೀಂದ್ರ ಶ್ರೀಕಂಠಯ್ಯ ಅವರಿಗೆ ಟಾಂಗ್ ನೀಡಿದರು.

2028ರ ಚುನಾವಣೆಯಲ್ಲಿ ಎನ್‌ಡಿಎ ಮೈತ್ರಿ ಸರ್ಕಾರವನ್ನು ಅಧಿಕಾರಕ್ಕೆ ತರುವುದು ನಮ್ಮೆಲ್ಲರ ಗುರಿಯಾಗಿದೆ. ಅದಕ್ಕಾಗಿ ಮೈತ್ರಿಕೂಟದ ಅಭ್ಯರ್ಥಿಗಳ ಗೆಲುವಿಗೆ ಈಗಿನಿಂದಲೇ ಕಾರ್ಯಕರ್ತರು ಟೊಂಕಕಟ್ಟಿ ನಿಲ್ಲಬೇಕಿದೆ. ಕುಮಾರಸ್ವಾಮಿ ಅವರನ್ನು ರಾಜ್ಯದ ಮುಖ್ಯಮಂತ್ರಿಯಾಗಿ ಮಾಡುವ ಮಹತ್ವದ ಹೊಣೆಗಾರಿಕೆ ನಮ್ಮ ಮೇಲಿದೆ. ರಾಜ್ಯದ ಅಭಿವೃದ್ಧಿ ದೃಷ್ಟಿಯಿಂದ ಪ್ರಾದೇಶಿಕ ಪಕ್ಷ ಜನತಾದಳಕ್ಕೆ ಹೆಚ್ಚಿನ ಶಕ್ತಿ ತುಂಬಬೇಕು ಎಂದು ಹೇಳಿದರು.

ದಳಪತಿ ನಿಖಿಲ್ ಕುಮಾರಸ್ವಾಮಿಗೆ ಅದ್ಧೂರಿ ಸ್ವಾಗತ

• **ಕನ್ನಡಪ್ರಭ ವಾರ್ತೆ** ಪಾಂಡವಪುರ

ಪಟ್ಟಣದಲ್ಲಿ ಗುರುವಾರ ನಡೆದ ಜನರೊಂದಿಗೆ ಜನತಾದಳ ಹಾಗೂ ಪಕ್ಷದ ರಜತ ಮಹೋತ್ಸವ ಸಮಾರಂಭಕ್ಕೆ ಆಗಮಿಸಿದ ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರನ್ನು ಸಹಸ್ರಾರು ಜನರೊಂದಿಗೆ ಮುಖಂಡರು– ಕಾರ್ಯಕರ್ತರು ಅದ್ಧೂರಿಯಾಗಿ ಸ್ವಾಗತ ಕೋರಿದರು.

ಮಂಡ್ಯ ಸರ್ಕಲ್‌ನಿಂದ ತೆರೆದ ವಾಹನದಲ್ಲಿ ನಿಖಿಲ್‌ಕುಮಾರಸ್ವಾಮಿ ಅವರನ್ನು ವೇದಿಕೆಯವರೆಗೆ ಕರೆತರಲಾಯಿತು. ಮೆರವಣಿಗೆಯಲ್ಲಿ ಸಾವಿರಾರು ಸಂಖ್ಯೆಯಲ್ಲಿ ಜನರು ಸೇರಿದ್ದರು. ಕ್ರೇನ್ ಮೂಲಕ ಬೃಹತ್ ಗಾತ್ರದ ಹೂವಿನ ಹಾರ, ಬೆಲ್ಲ, ಮೂಸಂಬಿ ಹಾರ ಹಾಕಿ ಬರಮಾಡಿಕೊಂಡರು. ಯುವ ನಾಯಕನಿಗೆ ದಾರಿಯುದ್ದಕ್ಕೂ ಸಾರ್ವಜನಿಕರು ಪಟಾಕಿ ಸಿಡಿಸಿ, ಹೂಮಳೆಗರೆದು ಸ್ವಾಗತಿಸಿದರು.

ಕಾರ್ಯಕ್ರಮದಲ್ಲಿ ಮಂಡ್ಯದಲ್ಲಿ ಮೇ 16 ಮತ್ತು 17ರಂದು ನಡೆಯಲಿರುವ ಜನತಾದಳ ಪ್ರೀಮಿಯರ್‌ಲೀಗ್ ಲೋಗೋವನ್ನು ನಿಖಿಲ್



ಪಾಂಡವಪುರದ ಮಂಡ್ಯ ಸರ್ಕಲ್‌ನಿಂದ ತೆರೆದ ವಾಹನದಲ್ಲಿ ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರನ್ನು ವೇದಿಕೆಗೆ ಕರೆತರಲಾಯಿತು.

ಕುಮಾರಸ್ವಾಮಿ ಅವರು ಬಿಡುಗಡೆ ಮಾಡಿದರು. ನಿಖಿಲ್ ಅಭಿಮಾನಿಗಳು, ಕಾರ್ಯಕರ್ತರು ವೇದಿಕೆ ಮೇಲೆ ಹಾರಗಳನ್ನು ಹಾಕಿ ಸೆಲ್ಫಿ ಫೋಟೋ ಕ್ಲಿಕ್ಕಿಸಿಕೊಂಡು ಸಂಭ್ರಮಿಸಿದರು. ಜನರೆಲ್ಲರಿಗೂ ಭೋಜನದ ವ್ಯವಸ್ಥೆ ಮಾಡಲಾಗಿತ್ತು. ಪೊಲೀಸರ ಭದ್ರತೆಯನ್ನು ಒದಗಿಸಲಾಗಿತ್ತು.

ಬೆಳ್ಳಿಹಬ್ಬದ ಸಂಭ್ರಮ | ಸುಳ್ಳುಗಳ ಗೋಪುರ ಕಟ್ಟಿಕೊಂಡು ಕಾಂಗ್ರೆಸ್ ಆಡಳಿತ | 10 ತಿಂಗಳ ಗೃಹಲಕ್ಷ್ಮೀ ಹಣದ ಬಾಕಿ ಮಹಿಳೆಯರಿಗೆ ಕೊಟ್ಟಿಲ್ಲ: ಕೃಷ್ಣಾರೆಡ್ಡಿ

25 ವರ್ಷಗಳ ಪೂರೈಸಿದ ಏಕೈಕ ಪ್ರಾದೇಶಿಕ ಪಕ್ಷ ಜೆಡಿಎಸ್

• **ಕನ್ನಡಪ್ರಭ ವಾರ್ತೆ** ಪಾಂಡವಪುರ

ರಾಜ್ಯದಲ್ಲಿ ಯಾವುದಾದರೂ ಪ್ರಾದೇಶಿಕ ಪಕ್ಷ 25 ವರ್ಷ ಪೂರೈಸಿದೆ ಎಂದರೆ ಅದು ಜೆಡಿಎಸ್ ಮಾತ್ರ ಎಂದು ಕೋರ್ ಕಮಿಟಿ ಅಧ್ಯಕ್ಷ ಕೃಷ್ಣಾರೆಡ್ಡಿ ತಿಳಿಸಿದರು.

ಗುರುವಾರ ಪಟ್ಟಣದ ಪಾಂಡವ ಕ್ರೀಡಾಂಗಣದ ಬಳಿ ಆಯೋಜಿಸಿದ್ದ ಜೆಡಿಎಸ್ ಪಕ್ಷದ ಬೆಳ್ಳಿ ಹಬ್ಬ ಹಾಗೂ ಜನರೊಂದಿಗೆ ಜನತಾದಳ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಬಂಗಾರಪ್ಪ, ಯಡಿಯೂರಪ್ಪ, ಶ್ರೀರಾಮುಲು, ಜನಾರ್ಧನ ರೆಡ್ಡಿ ಕರ್ನಾಟಕದಲ್ಲಿ ಪಕ್ಷ ಕಟ್ಟಿದರೂ ಯಾವ ಪಕ್ಷವೂ ಉಳಿಯಲಿಲ್ಲ. ದೇವೇಗೌಡರು ಕಟ್ಟಿದ ಜೆಡಿಎಸ್ ಪಕ್ಷ ಮಾತ್ರ 25 ವರ್ಷ ಪೂರೈಸಿದ ಏಕೈಕ ಪ್ರಾದೇಶಿಕ ಪಕ್ಷವಾಗಿದೆ ಎಂದು ಹೇಳಿದರು.

ಸುಳ್ಳು ಹೇಳಿಕೊಂಡು ಅಧಿಕಾರಕ್ಕೆ ಬಂದ ಕಾಂಗ್ರೆಸ್, ಗ್ಯಾರಂಟಿ ಹೆಸರಿನಲ್ಲಿ ಜನರನ್ನು ವಂಚಿಸುವ ಕೆಲಸ ಮಾಡುತ್ತಿದೆ. ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಬಂದು 3 ವರ್ಷಗಳಾಗಿದೆ. 36 ತಿಂಗಳಲ್ಲಿ 26 ತಿಂಗಳು ಮಾತ್ರ ಮಹಿಳೆಯರಿಗೆ ಗೃಹಲಕ್ಷ್ಮೀ ಹಣ ನೀಡಿದೆ. ಹತ್ತು ತಿಂಗಳ



ಜೆಡಿಎಸ್ ಕೋರ್‌ಕಮಿಟಿ ಸದಸ್ಯ ಕೃಷ್ಣಾರೆಡ್ಡಿ ಅವರೊಂದಿಗೆ ಮಾಜಿ ಸಚಿವ ಸಿ.ಎಸ್.ಪುಟ್ಟರಾಜು ಮಾತುಕತೆಯಲ್ಲಿ ತೊಡಗಿರುವುದು.

ಬಾಕಿ ಬರಬೇಕು. ಪ್ರತಿಯೊಬ್ಬ ಮಹಿಳೆಗೆ ₹20 ಸಾವಿರ ಹಣ ನೀಡಬೇಕು. ಗೃಹಲಕ್ಷ್ಮೀ ಹಣದಲ್ಲಿ ₹1.26 ಕೋಟಿ ಬಾಕಿ ಉಳಿಸಿಕೊಂಡಿದೆ. ವಿದ್ಯುತ್ ಬಿಲ್ ಉಚಿತ ಎಂದೇಳಿ ₹3.50 ಇದ್ದ ಯೂನಿಟ್ ದರವನ್ನು ₹7.85 ಗೆ ಹೆಚ್ಚಿಸಿದೆ. ನಿರುದ್ಯೋಗ ಭತ್ಯೆ ನೀಡುತ್ತಿದ್ದೇವೆ ಎನ್ನುತ್ತಾರೆ. ಎಷ್ಟು ಜನರಿಗೆ ನಿರುದ್ಯೋಗ ಭತ್ಯೆ ನೀಡಿದೆ ಎಂಬುದರ ಬಗ್ಗೆ ಸ್ಪಷ್ಟನೆ ನೀಡಲಿ ಎಂದು ಸವಾಲು ಹಾಕಿದರು.

ಸುಳ್ಳು ಹೇಳಿಕೊಂಡು ನಯವಾಗಿ ಜನರಿಗೆ ವಂಚನೆ ಮಾಡುವ ಕೆಲಸವನ್ನು ಕಾಂಗ್ರೆಸ್ ಪಕ್ಷ ನಿರಂತರವಾಗಿ ಮಾಡಿಕೊಂಡು ಬರುತ್ತಿದೆ. ಮೇಕೆದಾಟು ಯೋಜನೆ ಹಾಗೂ ಎತ್ತಿನ ಹೊಳೆ ಯೋಜನೆ ಮಾಡುತ್ತೇವೆ ಎಂದರು. ಮೇಕೆನೂ ಇಲ್ಲ ದಾಟು ಇಲ್ಲ ಎಂದು ಲೇವಡಿ ಮಾಡಿದ ಅವರು, 2014ರಲ್ಲಿ ಸಿದ್ದರಾಮಯ್ಯ ಅವರೇ ಮುಖ್ಯಮಂತ್ರಿಯಾಗಿದ್ದ ವೇಳೆ ಎತ್ತಿನಹೊಳೆ ಯೋಜನೆಗೆ ₹12.50 ಸಾವಿರ ಕೋಟಿ ಇದ್ದ ಯೋಜನೆ ಇದೀಗ ₹30 ಸಾವಿರ ಕೋಟಿ ಆಗಿದೆ. ಆದರೆ, ಒಂದು ಹನಿಯೂ ನೀರು ಹರಿಸಲಿಲ್ಲ ಎಂದು ಕುಟುಕಿದರು.

ರಾಜ್ಯ ಸರ್ಕಾರ ₹9 ಲಕ್ಷ ಕೋಟಿ ಸಾಲದಲ್ಲಿದೆ. ₹1 ಲಕ್ಷ ಕೋಟಿ ಬಡ್ಡಿ ಕಟ್ಟುತ್ತಿದೆ. ಪ್ರತಿಯೊಬ್ಬರ ತಲೆ ಮೇಲೆ ಒಂದೊಂದು ಲಕ್ಷ ಸಾಲ ಹೊರಿಸಿದ ಕೀರ್ತಿ ಕಾಂಗ್ರೆಸ್ ಸರ್ಕಾರದ ಸಾಧನೆಯಾಗಿದೆ. ಇದೇ ರೀತಿ ಮುಂದುವರಿದರೆ ರಾಜ್ಯವನ್ನು ಅಡಮಾನ ಇಡುವ ಕಾಲ ದೂರವಿಲ್ಲ. ಆದ್ದರಿಂದ ಜನತೆ ಎಚ್ಚೆತ್ತುಕೊಳ್ಳಬೇಕಿದೆ ಎಂದು ಎಚ್ಚರಿಸಿದರು.

ಮಾಜಿ ಶಾಸಕ ಅನ್ನದಾನಿ ಮಾತನಾಡಿ, ಜಿಲ್ಲೆಯಲ್ಲಿ ಮೇಲುಕೋಟೆ ವಿಧಾನಸಭಾ ಕ್ಷೇತ್ರ ಮಾದರಿ ಕ್ಷೇತ್ರವಾಗಿದೆ. ಅಭಿವೃದ್ಧಿ ಪರ ಚಿಂತಕ ಸಿ.ಎಸ್.ಪುಟ್ಟರಾಜು ಜನಪರ ಕೆಲಸಗಳು ಕಣ್ಣಿಗೆ ಕಾಣಿಸುತ್ತವೆ. ಅವರು ಕ್ಷೇತ್ರಕ್ಕೆ ಏನೇನು ಕೊಡುಗೆ ನೀಡಿದ್ದಾರೆ ಎಂಬುದು ಎಲ್ಲರಿಗೂ ಗೊತ್ತಿದೆ ಎಂದರು.

ದೇವೇಗೌಡರು 6 ದಶಕಗಳ ಕಾಲ ಎಲ್ಲ ವರ್ಗದ ಜನರಿಗೆ ನ್ಯಾಯ ಒದಗಿಸುತ್ತಿದ್ದಾರೆ. ದೇವರಾಜ ಅರಸು ಅವರನ್ನು ಇಂದಿಗೂ ಒಳ್ಳೆಯ ಆಡಳಿತಗಾರ ಎನ್ನುತ್ತಾರೆ. ಆದರೆ, ಅರಸು ಸ್ವತಃ ಕಟ್ಟಿದ ಪಕ್ಷವನ್ನೇ ಅವರಿಂದ ಉಳಿಸಿಕೊಳ್ಳಲಾಗಲಿಲ್ಲ. ಆನಂತರದಲ್ಲಿ ಬಂಗಾರಪ್ಪ, ಯಡಿಯೂರಪ್ಪ, ಶ್ರೀರಾಮುಲು, ಜನಾರ್ಧನ ರೆಡ್ಡಿ ಪಕ್ಷವನ್ನು ಕಟ್ಟಿದರಾದರೂ ಒಂದು ವರ್ಷವೂ ಪಕ್ಷವನ್ನು ಉಳಿಸಿಕೊಳ್ಳುವುದಕ್ಕೆ ಆಗಲಿಲ್ಲ. ಆದರೆ, ದೇವೇಗೌಡರ ಸಮರ್ಥ ನಾಯಕತ್ವದಲ್ಲಿ ಜೆಡಿಎಸ್ ಪಕ್ಷ 25 ವರ್ಷ ಪೂರೈಸಿ ಇತಿಹಾಸ ಸೃಷ್ಟಿಸಿದೆ ಎಂದು ಹೇಳಿದರು.



ನಿಖಿಲ್ ಕುಮಾರಸ್ವಾಮಿ ಅವರು ಕನ್ನಡಪ್ರಭ ಪತ್ರಿಕೆ ಓದುತ್ತಿರುವುದು.



ಜನತಾದಳ ಪ್ರೀಮಿಯರ್‌ಲೀಗ್ ಕ್ರಿಕೆಟ್ ಪಂದ್ಯದ ಲೋಗೋ ಬಿಡುಗಡೆ.

ಜಿಲ್ಲೆಗೆ ₹2500 ಕೋಟಿ ಅನುದಾನ ಬಿಡುಗಡೆ: ಡಿಕೆಶಿ

ಶಾಸಕ ಉದಯ್‌ರಿಂದ ಮೂರೇ ವರ್ಷದಲ್ಲಿ ಕೇಳರಿಯದ ಅಭಿವೃದ್ಧಿ | ಮದ್ದೂರು ಉತ್ಸವದಲ್ಲಿ ಡಿಸಿಎಂ ಭಾಗಿ

• **ಕನ್ನಡಪ್ರಭ ವಾರ್ತೆ** ಮದ್ದೂರು

ಕೆಆರ್‌ಎಸ್ ಜಲಾಶಯದಿಂದ ಕೊನೆ ಭಾಗದ ರೈತರ ಬೇಸಾಯಕ್ಕೆ ಸರಾಗವಾಗಿ ನೀರನ್ನು ಹರಿಸುವ ಮೂಲಕ ರೈತರ ಬದುಕನ್ನು ಹಸನಾಗಿಸುವ ಉದ್ದೇಶದಿಂದ ಜಿಲ್ಲೆಗೆ ₹2500 ಕೋಟಿಗೂ ಹೆಚ್ಚಿನ ಅನುದಾನದಲ್ಲಿ ನಾಲೆಗಳ ಆಧುನೀಕರಣ ಮಾಡಲಾಗುತ್ತಿದೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್‌ಬುಧವಾರ ಹೇಳಿದರು.

ಮದ್ದೂರಿನ ಗ್ರಾಮದೇವತೆ ಶ್ರೀ ಮದ್ದೂರಮ್ಮ ಜಾತ್ರಾ ಮಹೋತ್ಸವ ಹಾಗೂ ಶ್ರೀ ಉಗ್ರ ನರಸಿಂಹ ಸ್ವಾಮಿಯ ರಥೋತ್ಸವದ ಅಂಗವಾಗಿ ತಾಲೂಕು ಕ್ರೀಡಾಂಗಣದಲ್ಲಿ ನಡೆದ ಮದ್ದೂರು ಉತ್ಸವದಲ್ಲಿ ಮಾತನಾಡಿದರು.

ಈ ದೇಶದ ಸ್ವಾತಂತ್ರ್ಯ ಹೋರಾಟಕ್ಕೆ ತನ್ನದೇ ಆದ ಹೋರಾಟ ಮಾಡುವ ಮೂಲಕ ಮದ್ದೂರಿನ ಈ ಪುಣ್ಯಭೂಮಿ ಚರಿತ್ರೆಯ ಪುಟಗಳಲ್ಲಿ ದಾಖಲಾಗಿದೆ. ಹಲವು ಘಟಾನುಘಟಿ ನಾಯಕರುಗಳಿಗೆ ಜನ್ಮ ನೀಡಿರುವ ಗಂಡು ಮೆಟ್ಟಿದ ನಾಡಿದು. ಈಕ್ಷೇತ್ರದಲ್ಲಿ ಹಲವರು ಜನನಾಯಕರು ತಮ್ಮದೇ ಆದ ಅಭಿವೃದ್ಧಿ ಕಾರ್ಯಗಳ ಸಾಕ್ಷಿ ಗುಡ್ಡೆಯನ್ನು ಬಿಟ್ಟು ಹೋಗಿದ್ದಾರೆ ಎಂದರು.

ಶಾಸಕ ಉದಯ್ ಆಯ್ಕೆಯಾದ ಮೂರೇ ವರ್ಷಗಳಲ್ಲಿ ಕ್ಷೇತ್ರದ ಅಭಿವೃದ್ಧಿಗೆ ಸರ್ಕಾರದಿಂದ ₹2 ಸಾವಿರ ಕೋಟಿ ಅನುದಾನವನ್ನು ತಂದು ಹಿಂದೆಂದೂ ಕಂಡರಿಯದ ರೀತಿಯಲ್ಲಿ ಅಭಿವೃದ್ಧಿ ಪರ್ವಕ್ಕೆ ಮುನ್ನುಡಿ ಬರೆಯುತ್ತಿದ್ದಾರೆ ಎಂದು ಶ್ಲಾಘಿಸಿದರು.


ಮದ್ದೂರು ಉತ್ಸವದಲ್ಲಿ ರಸಮಂಜರಿಯನ್ನು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಉದ್ಘಾಟಿಸಿದರು.

ಮದ್ದೂರು ಕ್ಷೇತ್ರಕ್ಕೆ ಮೆಟ್ರೋ, ಏರ್‌ಪೋರ್ಟ್ ನಂತಹ ಯೋಜನೆಗಳು ಬೇಡ. ನೀರಾವರಿಗೆ ಹೆಚ್ಚಿನ ಅನುದಾನ ನೀಡಿ ಎಂದು ಶಾಸಕ ಉದಯ್ ಬೇಡಿಕೆ ಇಟ್ಟಿದ್ದರು, ಹೀಗಾಗಿ ತಾಲೂಕಿನ ಕೊನೆಭಾಗಕ್ಕೂ ಸರಾಗವಾಗಿ ನೀರು ಹರಿದು ರೈತರ ಬೇಸಾಯಕ್ಕೆ ನೀರನ್ನು ಹರಿಸುವ ಮೂಲಕ ರೈತರ ಬದುಕನ್ನು ಹಸನಾಗಿಸುವ ಉದ್ದೇಶದಿಂದ ಜಿಲ್ಲೆಗೆ ₹2500 ಕೋಟಿಅನುದಾನನೀಡಲಾಗಿದೆ ಎಂದರು.

₹800 ಕೋಟಿಯನ್ನು ಮದ್ದೂರು ಕ್ಷೇತ್ರಕ್ಕೆ ಬಿಡುಗಡೆ ಮಾಡುವ ಮೂಲಕ ಸೂಳೆಕೆರೆ, ಮದ್ದೂರು ಕೆರೆಗಳ ಒತ್ತುವರಿ ತೆರವು ಮಾಡಿ ಅಭಿವೃದ್ಧಿಗೊಳಿಸಿ ನಾಲೆಗಳ ಆಧುನೀಕರಣ ಮಾಡಿ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಒದಗಿಸುತ್ತಿದ್ದಾರೆ. ಇನ್ನು ಮೇಕೆದಾಟು ಯೋಜನೆಗೂ ಕೂಡ ಸುಪ್ರೀಂ ಕೋರ್ಟ್ ಅನುಮತಿ ನೀಡಿದ್ದು, ಈ ಯೋಜನೆ ಜಾರಿಗೆ ಬಂದ ಬಳಿಕ ಈ ಭಾಗದ ನೀರಾವರಿ ಸಮಸ್ಯೆಗೆ ಶಾಶ್ವತ ಮುಕ್ತಿ ಸಿಗಲಿದೆ ಎಂದು ಹೇಳಿದರು.

ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಮಾತನಾಡಿ, ಶಾಸಕ ಉದಯ್ ಅವರು ಅಭಿವೃದ್ಧಿ ಜೊತೆಗೆ ಕದಲೂರು ಉದಯ್ ಚಾರಿಟಬಲ್ ಟ್ರಸ್ಟ್ ಮೂಲಕ ಸಮಾಜ ಮುಖಿ ಕೆಲಸಗಳನ್ನು ಮಾಡುತ್ತಿರುವುದು ಶ್ಲಾಘನೀಯ. ಬೃಹತ್ ರಾಸುಗಳ ಜಾತ್ರೆ ಆಯೋಜಿಸಿ ಲಕ್ಷಾಂತರ ರುಪಾಯಿ ಬಹುಮಾನ ನೀಡುವ ಮೂಲಕ ರೈತರಿಗೆ ಹೆಚ್ಚಿನ ಬೆಂಬಲ ನೀಡಿದ್ದಾರೆ ಎಂದರು. ರಾಮನಗರ, ತುಮಕೂರು ಜಿಲ್ಲೆಗೆ ಸೀಮಿತವಾಗಿದ್ದ ಉತ್ಸವ ಕಾರ್ಯಕ್ರಮಗಳು ಮಂಡ್ಯ ಜಿಲ್ಲೆಗೂ ಕಾಲಿಟ್ಟಿದ್ದು, ಪ್ರಥಮವಾಗಿ ಮದ್ದೂರು ಉತ್ಸವ ಎಂಬ ಬೃಹತ್ ಕಾರ್ಯಕ್ರಮ ಆಯೋಜಿಸಿ ಮನರಂಜನೆ ಜೊತೆಗೆ ಹಲವು ಪ್ರತಿಭೆಗಳನ್ನು ಗುರುತಿಸುವ ಮೂಲಕ ಅವರನ್ನು ಗೌರವಿಸಿದ್ದಾರೆ ಎಂದರು. ಮಾಜಿ ಸಂಸದ ಹಾಗೂ ಬಮೂಲ್ ಅಧ್ಯಕ್ಷ ಡಿ.ಕೆ.ಸುರೇಶ್ ಮಾತನಾಡಿ, ಶಾಸಕ ಕೆ.ಎಂ.ಉದಯ್ ಅವರು ಜನರ ನಿರೀಕ್ಷೆಗೂ ಮೀರಿ ಕ್ಷೇತ್ರದಲ್ಲಿ ಅಭಿವೃದ್ಧಿ ಕಾರ್ಯಗಳಿಗೆ ಚಾಲನೆ ನೀಡುತ್ತಿದ್ದಾರೆ. ಈ ಹಿಂದೆ ಆಡಳಿತ ನಡೆಸಿದ್ದ ಯಾವ ಶಾಸಕರೂ ಮಾಡದಷ್ಟು ಅಭಿವೃದ್ಧಿ ಕೆಲಸಗಳನ್ನು ಮಾಡುವ ಮೂಲಕ ಹೊಸ ಹೊಸ ಚಿಂತನೆಗಳ ಮೂಲಕ ಕ್ಷೇತ್ರಕ್ಕೆ ಹೊಸ ರೂಪವನ್ನು ನೀಡುತ್ತಿದ್ದಾರೆ ಎಂದುಬಣ್ಣಿಸಿದರು. ಶಾಸಕರಾದಪಿ.ರವಿಕುಮಾರ್, ವಿನುತಾ ಉದಯ್, ವಕೀಲರ ಸಂಘದ ಅಧ್ಯಕ್ಷ ಟಿ.ಎಸ್.ಸತ್ಯಾನಂದ, ಡಿಸಿಸಿ ಬ್ಯಾಂಕ್ ಉಪಾಧ್ಯಕ್ಷ ಸಿ.ಚೆಲುವರಾಜು, ನಿರ್ದೇಶಕ ಪಿ.ಸಂದರ್ಶ, ಮನ್ಮುಲ್ ನಿರ್ದೇಶಕ ಹರೀಶ್, ಭಾರತಿನಗರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಅಣ್ಣೂರು ರಾಜೀವ್ ಭಾಗವಹಿಸಿದ್ದರು.

ಕನ್ನಡ ಸಾಹಿತ್ಯ ಪರಿಷತ್ ನಮ್ಮ ಭಾಷೆ, ಸಂಸ್ಕೃತಿ ಬೇರು: ಡಾ.ಕಿಕ್ಕೇರಿ ಕೃಷ್ಣಮೂರ್ತಿ ಅಭಿಪ್ರಾಯ

• **ಕನ್ನಡಪ್ರಭ ವಾರ್ತೆ** ಕಿಕ್ಕೇರಿ

ಕನ್ನಡ ಭಾಷೆ ಜತೆಗೆ ಸಂಸ್ಕೃತಿ ಗಟ್ಟಿಯಾಗಿರಲು ಕನ್ನಡ ಸಾಹಿತ್ಯ ಪರಿಷತ್ ತಾಯಿ ಬೇರಾಗಿದೆ ಎಂದು ಕೆ.ಎಸ್. ನರಸಿಂಹಸ್ವಾಮಿ ಟ್ರಸ್ಟ್ ಅಧ್ಯಕ್ಷ ಕಿಕ್ಕೇರಿ ಕೃಷ್ಣಮೂರ್ತಿ ಅಭಿಪ್ರಾಯಪಟ್ಟರು.

ಪಟ್ಟಣದ ಸ್ಪಂದನಾ ಫೌಂಡೇಷನ್, ಕನ್ನಡ ಕಲಾಸಂಘ ಹಾಗೂ ಆದರ್ಶ ಸುಗಮ ಸಂಗೀತ ಅಕಾಡೆಮಿ ಟ್ರಸ್ಟ್ ಆಯೋಜಿಸಿದ್ದ ಕನ್ನಡ ಸಾಹಿತ್ಯ ಪರಿಷತ್ 113ನೇ ಸಂಸ್ಥಾಪನಾ ದಿನಾಚರಣೆಯಲ್ಲಿ ಮಾತನಾಡಿ, ನಾಲ್ವಡಿಯವರ ದೂರದೃಷ್ಟಿಯಿಂದ 1915ರಲ್ಲಿ ಪರಿಷತ್ ಸ್ಥಾಪನೆಯಾಗಿದೆ. ಕಿಕ್ಕೇರಿಯ ಮೈಸೂರ ಮಲ್ಲಿಗೆ ಕವಿ ಕೆ.ಎಸ್.ನರಸಿಂಹಸ್ವಾಮಿ ಮೈಸೂರಿನಲ್ಲಿ ನಡೆದ ಸಮ್ಮೇಳನದ ಅಧ್ಯಕ್ಷರಾಗಿದ್ದರು. ಪರಿಷತ್ ಸಾಹಿತಿ, ಕವಿ, ಗಾಯಕರು, ವಿದ್ವಾಂಸರ ಸಂಗಮ ಕೂಟವಾಗಿ ಸುಭದ್ರವಾಗಿದೆ ಎಂದರು.

ಬೆಂಗಳೂರಿನ ಬಸವನಗುಡಿ ಕ್ಷೇತ್ರಕ್ಕೆತಾನು 2 ಬಾರಿ ಪರಿಷತ್ ಅಧ್ಯಕ್ಷನಾಗಿದ್ದೆ. ನಗರ ಪ್ರದೇಶದಲ್ಲಿ ಸಮ್ಮೇಳನ ನಡೆಸಲು ಕಷ್ಟವಾಗಲಾರದು. ಅದರೆ, ತಾಲೂಕು ಮಟ್ಟದಲ್ಲಿ ಸಮ್ಮೇಳನ ಆಯೋಜಿಸಲು ಕಷ್ಟವಿದೆ. ಸರ್ಕಾರ, ಪರಿಷತ್ ಗೆ ವಿಶೇಷಅನುದಾನ ನೀಡಬೇಕಿದೆ. ಸಮ್ಮೇಳನ ಗಡಿಪ್ರದೇಶದಲ್ಲಿ ಹೆಚ್ಚು ನಡೆಯುವ ಜತೆಗೆ ನೆಲದ ಭಾಷೆ, ಸಂಸ್ಕೃತಿ ಉಳಿಯಲು ಗಡಿ ಪ್ರದೇಶದ ಜನರ ಧ್ವನಿಯಾಗಬೇಕಿದೆ ಎಂದು ತಿಳಿಸಿದರು.



ಪರಿಷತ್‌ಅಡಿ ನೂರಾರು ಕನ್ನಡಪರ ಸಂಸ್ಥೆಗಳಿವೆ. ಎಲ್ಲ ಸಂಸ್ಥೆಗಳ ಧ್ಯೇಯ ಕನ್ನಡ ಭಾಷೆ, ಸಂಸ್ಕೃತಿ ಉಳಿವಾಗಿದೆ. ಕನ್ನಡ ಶಾಲೆ ಮುಚ್ಚುವಂತಾಗಬಾರದು. ಕನ್ನಡಿಗರು ಕರ್ನಾಟಕದಲ್ಲಿಸಾರ್ವಭೌಮರಾಗಬೇಕುಎಂದು ಹೇಳಿದರು.

ಪುತಿನ, ಕುವೆಂಪು, ಸಿ.ಅಶ್ವಥ್, ದ.ರಾ. ಬೇಂದ್ರೆ, ಕೆ.ಎಸ್.ನ. ಮತ್ತಿತರರನ್ನು ಸ್ಮರಿಸಿ ಗಾಯಕರು ಕನ್ನಡ ಭಾವಗೀತೆಗಳನ್ನು ಹಾಡಿದರು. ಟ್ರಸ್ಟಿ ತ್ರಿವೇಣಿ, ಮುಖಂಡರಾದ ಸೋಮು, ರಾಜು, ಮಹೇಂದ್ರ, ವೆಂಕಟೇಶ್, ಕವಿತಾ ಇದ್ದರು.

ಸಿಎಂ ಕುರ್ಚಿ ಗುದ್ದಾಟದಿಂದ ಕಾಂಗ್ರೆಸ್ ಸರ್ಕಾರ ಪತನ: ನಿಖಿಲ್

ಮದ್ದೂರು: ಸಿಎಂ ಸಿದ್ದರಾಮಯ್ಯ ಮತ್ತು ಡಿಸಿಎಂ ಡಿ.ಕೆ. ಶಿವಕುಮಾರ್‌ನಡುವಿನ ಕುರ್ಚಿ ಗುದ್ದಾಟದಿಂದ ಕಾಂಗ್ರೆಸ್ ಸರ್ಕಾರ ಪತನವಾಗಲಿದೆ ಎಂದು ಜೆಡಿಎಸ್ ಯುವ ಘಟಕದ ರಾಜ್ಯಾಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಗುರುವಾರ ಹೇಳಿದರು.

ಪಟ್ಟಣದ ಎಂ.ಎಸ್.ಸಿದ್ದರಾಜು ಕಾಂಪ್ಲೆಕ್ಸ್ ನಲ್ಲಿ ನೂತನವಾಗಿ ಪ್ರಾರಂಭಗೊಂಡ ಪರಿಮಳ ಬೇಕರಿ ಉದ್ಘಾಟನೆ ಕಾರ್ಯಕ್ರಮದಲ್ಲಿ ಪಾಲ್ಗೊಂಡ ನಂತರ ಸುದ್ದಿಗಾರರೊಂದಿಗೆ ಮಾತನಾಡಿ, ಸಿಎಂಸ್ಥಾನ ಉಳಿಸಿಕೊಡಲು ಸಿದ್ದರಾಮಯ್ಯ ಒಂದೆಡೆ ಹೋರಾಟ ಮಾಡುತ್ತಿದ್ದಾರೆ. ಅದೇ ರೀತಿ ಸಿಎಂ ಕುರ್ಚಿ ಪಡೆಯಲು ಡಿ.ಕೆ. ಶಿವಕುಮಾರ್‌ಮತ್ತೊಂದು ರೀತಿ ಹೋರಾಟ ಮಾಡುತ್ತಿದ್ದಾರೆ. ಹೀಗಾಗಿ ಇಬ್ಬರ ಕಿತ್ತಾಟದಲ್ಲಿ ರಾಜ್ಯದ ಅಭಿವೃದ್ಧಿ ಕುಂಠಿತಗೊಂಡಿದೆ ಎಂದು ಟೀಕಿಸಿದರು.



2028ರ ವಿಧಾನಸಭಾ ಚುನಾವಣೆಯಲ್ಲಿ ಜೆಡಿಎಸ್ ಮತ್ತೆ ಅಧಿಕಾರಕ್ಕೆ ಬರಲಿದೆ. ಎಚ್.ಡಿ.ಕುಮಾರಸ್ವಾಮಿ ಅವರು ಮುಖ್ಯಮಂತ್ರಿ ಆಗಬೇಕು ಎನ್ನುವುದು ಕಾರ್ಯಕರ್ತರ ಅಭಿಪ್ರಾಯವಾಗಿದೆ ಎಂದು ತಿಳಿಸಿದರು. ಮಾಜಿ ಸಚಿವ ಡಿ.ಸಿ.ತಮ್ಮಣ್ಣ, ಪುರಸಭೆ ಮಾಜಿ ಅಧ್ಯಕ್ಷ ಎಂ.ಐ.ಪ್ರವೀಣ್, ಚಾಮನಹಳ್ಳಿ ವಿಜಯಕುಮಾರ್‌ಅಲಿಯಾಸ್ ರಾಕಿ, ಕೊತ್ತನಹಳ್ಳಿ ಮಲ್ಲಿಕ್, ಹುಲಿಕೆರೆ ನಟರಾಜು ಮತ್ತಿತರರಿದ್ದರು.

ಅಂದು ಕಸದ ರಾಶಿಯ ಜಾಗ, ಈಗ ವಿಶ್ರಾಂತಿಯ ತಾಣ..!

ಕಸದಿಂದ ಬ್ಲಾಕ್ ಸ್ಪಾಟ್ ಆಗಿದ್ದ ಸ್ಥಳ ಸುಂದರವಾಗಿ ರೂಪಾಂತರ | ನಗರದೆಲ್ಲೆಡೆ ಸ್ವಚ್ಛ ಸರ್ವೇಕ್ಷಣಾ ಕಾರ್ಯಕ್ಕೆ ಆಯುಕ್ತರಿಂದ ಚುರುಕು

• **ಕನ್ನಡಪ್ರಭ ವಾರ್ತೆ** ಮಂಡ್ಯ

ನಗರದ ಶಂಕರಪುರದಲ್ಲಿ ಕಸದ ರಾಶಿಯ ತಾಣವಾಗಿ ಬ್ಲಾಕ್ ಸ್ಪಾಟ್ ಆಗಿದ್ದ ಸ್ಥಳವನ್ನು ಸ್ವಚ್ಛ ಸರ್ವೇಕ್ಷಣಾ ಕಾರ್ಯಕ್ರಮದಡಿ ಸುಂದರ ಸ್ಥಳವಾಗಿ ರೂಪಾಂತರಿಸಲಾಗಿದೆ. ಮೇಜು- ಕುರ್ಚಿಗಳನ್ನು ಸಿಮೆಂಟ್ ಕಾಂಕ್ರೀಟ್‌ನಿಂದ ಅಳವಡಿಸಿ ಸಾರ್ವಜನಿಕರ ವಿಶ್ರಾಂತಿಯ ತಾಣವಾಗಿ ಪರಿವರ್ತಿಸಿರುವುದು ಸುತ್ತಮುತ್ತಲಿನ ಜನರ ಮೆಚ್ಚುಗೆಗೆ ಪಾತ್ರವಾಗಿದೆ.


ಮೊದಲು


ನಂತರ

ನಗರದೆಲ್ಲೆಡೆ ಸ್ವಚ್ಛ ಸರ್ವೇಕ್ಷಣಾ ಕಾರ್ಯಕ್ಕೆ ನಗರಸಭೆ ಆಯುಕ್ತೆ ಯು.ಪಿ.ಪಂಪಾಶ್ರೀ ಚುರುಕು ನೀಡಿದ್ದಾರೆ. ಈ ಹಿಂದೆ ಚಾಮುಂಡೇಶ್ವರಿ ನಗರದ 6ನೇ ಕ್ರಾಸ್‌ನಲ್ಲಿ ಕಸದಿಂದ ತುಂಬಿ ತುಳುಕುತ್ತಾ, ಅವ್ಯವಸ್ಥೆಯ ಆಗರವಾಗಿದ್ದ ಸ್ಥಳವನ್ನು ಸ್ವಚ್ಛಗೊಳಿಸಿ ಅಲ್ಲಿ ಸುಂದರವಾದ ಗಿಡಗಳನ್ನು ನೆಟ್ಟು ಕಸಕ್ಕೆ ಮುಕ್ತಿ ದೊರಕಿಸಿದ್ದರು. ಇದೇ ಮಾದರಿಯಲ್ಲಿ ಹಲವೆಡೆ ಕಸದಿಂದ ಕೂಡಿದ್ದ ಪ್ರದೇಶಗಳಿಗೆ ಹೊಸ ರೂಪ ನೀಡಿದ್ದಾರೆ.

ಅದೇ ರೀತಿ ಕಳೆದೊಂದು ತಿಂಗಳ ಹಿಂದೆ ಶಂಕರಪುರದ ಮುಖ್ಯ ರಸ್ತೆಯ ಪಕ್ಕದಲ್ಲೇ ಕಸ ಚೆಲ್ಲಾಡುತ್ತಿತ್ತು. ಎಷ್ಟೇ ಬಾರಿ ಕಸವನ್ನು ತೆರವುಗೊಳಿಸಿದರೂ ಮತ್ತೆ ಅದೇ ಜಾಗದಲ್ಲಿ ಸಾರ್ವಜನಿಕರು ಕಸ ಹಾಕುವುದು ಮಾಮೂಲಾಗಿತ್ತು. ಕಸಕ್ಕೆ ತಾರ್ಕಿಕ ಅಂತ್ಯ ಕಾಣಿಸಲು ಮುಂದಾದ ಆಯುಕ್ತರು ಪೌರ ಕಾರ್ಮಿಕರೊಂದಿಗೆ ಸ್ಥಳಕ್ಕೆ ತೆರಳಿ ಕಸವನ್ನೆಲ್ಲಾ ಸಂಪೂರ್ಣ ತೆರವುಗೊಳಿಸಿದ ಬಳಿಕ ಅಲ್ಲಿ ಸಿಮೆಂಟ್ ಇಟ್ಟಿಗೆಗಳಿಂದ ಕುರ್ಚಿಗಳನ್ನು ನಿರ್ಮಿಸಿ, ಮೇಜಿನ ರೂಪದ ಕಾಂಕ್ರೀಟ್ ನಿರ್ಮಿಸಿ ಅದಕ್ಕೆ ಅಲಂಕಾರಿಕ ಬಣ್ಣಗಳನ್ನು ಲೇಪನ ಮಾಡಿಸಿದ್ದಾರೆ.

ಸುಂದರವಾದ ಚಿತ್ರಗಳನ್ನು ಬಿಡಿಸಿ ಕಸವನ್ನು ಕಸದ ಬುಟ್ಟಿಗೆ ಹಾಕಿ ಸ್ವಚ್ಛತೆಯನ್ನು ಕಾಪಾಡಿ, ಪ್ಲಾಸ್ಟಿಕ್ ತ್ಯಜಿಸಿ ಪರಿಸರ ಉಳಿಸಿ ಎಂಬ ಘೋಷ ವಾಕ್ಯ ಬರೆಸಿ ಸ್ವಚ್ಛತೆ ಕಾಪಾಡುವಂತೆ ಕೋರಿದ್ದಾರೆ.

ಇದೇ ಮಾದರಿಯಲ್ಲಿ ಕಸದಿಂದ ಕೂಡಿರುವ ಪ್ರದೇಶಗಳಿಗೆ ಹೊಸ ರೂಪ ನೀಡುವಂತೆ ಆಯುಕ್ತೆ ಯು.ಪಿ.ಪಂಪಾಶ್ರೀ ಅವರು ಆರೋಗ್ಯ ನಿರೀಕ್ಷಕರಿಗೆ ಸೂಚಿಸಿದ್ದಾರೆ.

ಹಂತ ಹಂತವಾಗಿ ಕಸದಿಂದ ಕೂಡಿರುವ ಪ್ರದೇಶಗಳನ್ನು ರೂಪಾಂತರಿಸುವ ಕಾರ್ಯ ನಡೆಸಲಾಗುವುದು. ಈಗಾಗಲೇ ಹಲವು ಪ್ರದೇಶಗಳನ್ನು ಗುರುತಿಸಿ ಪರಿವರ್ತನೆಗೆ ಟೊಂಕಕಟ್ಟಿ ನಿಂತಿದ್ದಾರೆ.



ಸ್ವಚ್ಛ ಸರ್ವೇಕ್ಷಣಾ ಕಾರ್ಯವನ್ನು ನಗರದೆಲ್ಲೆಡೆ ನಡೆಸಲಾಗುತ್ತಿದೆ. ಚಾಮುಂಡೇಶ್ವರಿ ನಗರ, ಶಂಕರಪುರ ಸೇರಿದಂತೆ ಹಲವೆಡೆ ಕಸದಿಂದ ತುಂಬಿರುವ ಜಾಗಗಳನ್ನು ರೂಪಾಂತರಿಸಲಾಗಿದೆ. ಆದರೂ ಜನರು ಸಿಕ್ಕ ಸಿಕ್ಕಲ್ಲಿ ಕಸ ಹಾಕುವುದು ಮುಂದುವರಿದಿದೆ. ಇದಕ್ಕೆ ಕಡಿವಾಣ ಹಾಕಲು ದಂಡ ವಿಧಿಸುವ ಕಾರ್ಯವನ್ನು ಕೈಗೆತ್ತಿಕೊಳ್ಳಲಾಗುತ್ತದೆ. ಜೊತೆಗೆ ಆ ಸ್ಥಳಗಳಲ್ಲಿ ಸೀಸಿ ಕ್ಯಾಮೆರಾ ಅಳವಡಿಸಲಾಗುತ್ತಿದ್ದು, ದಂಡದ ಜೊತೆಗೆ ಪ್ರಕರಣವನ್ನು ದಾಖಲಿಸಲಾಗುವುದು.

• **ಯು.ಪಿ.ಪಂಪಾಶ್ರೀ,** ಆಯುಕ್ತರು, ನಗರಸಭೆ

ನಗರದ ಎಲ್ಲೆಡೆ ಸ್ವಚ್ಛ ಸರ್ವೇಕ್ಷಣಾ ಕಾರ್ಯ ನಡೆಸಲಾಗಿದೆ. ಈ ಕಾರ್ಯ ಯಶಸ್ವಿಯಾಗಬೇಕಾದರೆ ನಗರದ ಜನರು ನಗರಸಭೆಯೊಂದಿಗೆ ಸಹಕರಿಸಬೇಕು. ನಾಗರಿಕರು ಸಿಕ್ಕ ಸಿಕ್ಕಲ್ಲೆಲ್ಲಾ ಕಸ ಹಾಕಬಾರದು. ಇದರಿಂದ ನಗರದ ಸೌಂದರ್ಯೀಕರಣ ಹಾಳಾಗುತ್ತದೆ. ಪ್ರತಿದಿನ ಮನೆ ಮನೆಗೆ ಬಂದು ಕಸ ಸಂಗ್ರಹಿಸುವ ವಾಹನಗಳಿಗೆ ಕಸ ಹಾಕುವಂತೆ ನಗರಸಭೆ ಅಧಿಕಾರಿಗಳು ಮನವಿ ಮಾಡಿದ್ದಾರೆ.